ಸಂಪುಟ : 9 ಸಂಚಿಕೆ 99 ಪುಟ : 4 ಬೆಲೆ: 3.00 ಮಂಗಳವಾರ ಮೇ 21 2024 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ

Volume : 9 Issue : 99 Pages : 4 Price : 3.00 Tuesday May 21 2024 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

ಬರ ಪರಿಸ್ಥಿತಿ ಕುರಿತು ಉಸ್ತುವಾರಿ ಸಚಿವ ಎಚ್.ಕೆ. ಪಾಟೀಲರಿಂದ ಪರಿಶೀಲನಾ ಸಭೆ

ಕುಡಿಯುವ ನೀರು ಪೂರೈಕೆಯಲ್ಲಿ ನಿರ್ಲಕ್ಷ್ಯ ಬೇಡ

■ ವಿಜಯಸಾಕ್ಷಿ ಸುದ್ದಿ, ಗದಗ

ಜಿಲ್ಲೆಯಲ್ಲಿ ಬರ ನಿರ್ವಹಣೆಯನ್ನು ಸಮರ್ಪಕವಾಗಿ ನಿಭಾಯಿಸಬೇಕು. ಈ ಕುರಿತು ಅಧಿಕಾರಿಗಳು ನಿರ್ಲಕ್ಷ್ಯ ತೆ-ಾರದೇ ಖುದ್ದಾಗಿ ನೀರಿನ ಸಮಸ್ಯೆ ಇರುವ ಸ್ಥಳಗಳಿಗೆ ಭೇಟಿ ನೀಡಿ, ಸಾರ್ವಜನಿಕರಿಗೆ ಸ್ಪಂದಿಸಿ ಕೆಲಸ ನಿರ್ವಹಿಸಬೇಕು ಎಂದು ರಾಜ್ಯದ ಕಾನೂನು, ನ್ಯಾಯ, ಮಾನವ ಹಕ್ಕುಗಳು, ಸಂಸದೀಯ ವ್ಯವಹಾರ, ಶಾಸನ ರಚನೆ ಹಾಗೂ ಪ್ರವಾಸೋದ್ಯಮ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಎಚ್.ಕೆ. ಪಾಟೀಲ ತಿಳಿಸಿದರು.

ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಸೋಮವಾರ ನಡೆದ ಬರ ನಿರ್ವಹಣೆ ಕುರಿತ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಸಾರ್ವಜನಿಕರಿಗೆ ಯಾವುದೇ ಕಾರಣಕ್ಕೂ ಕುಡಿಯುವ ನೀರಿನ ಸಮಸ್ಯೆಯಾಗದಂತೆ ಕ್ರಮ ಕೈಗೊಳ್ಳಬೇಕು. ಕುಡಿಯುವ ನೀರಿನ ಸಮಸ್ಯೆಯಿರುವ ಸ್ಥಳಗಳಿಗೆ ಖಾಸಗಿ ಬೋರ್‌ವೆಲ್ ಅಥವಾ ಟ್ಯಾಂಕರ್‌ಗಳ ಮುಖಾಂತರ ನೀರು ಪೂರೈಕೆಗೆ ಕ್ರಮ ವಹಿಸಬೇಕು. ನಗರ ಪ್ರದೇಶಗಳಲ್ಲಿ ಹೆಚ್ಚಿನ ಜನಸಂದಣಿಯಿರುವ ಪ್ರದೇಶಗಳಲ್ಲಿ ಇನ್ನೂ ಹೆಚ್ಚಿನ ಸಂಖ್ಯೆಯಲ್ಲಿ ಟ್ಯಾಂಕರ್‌ಗಳ ಮೂಲಕ ನೀರು ಪೂರೈಕೆಗೆ ಸೂಚಿಸಿದರು.

ರೈತರಿಗೆ ಬೆಳೆ ಪರಿಹಾರ ವಿತರಣೆಯಲ್ಲಿ ವಿಳಂಬವಾಗಬಾರದು. ಕುಡಿಯುವ ನೀರಿನ ಸಮಸ್ಯೆ ಕುರಿತಂತೆ ಈಗಾಗಲೇ ಸಹಾಯವಾಣಿ ಸ್ಥಾಪಿಸಲಾಗಿದ್ದು, ಈ ಸಂಬಂಧ ಸಾರ್ವಜನಿಕರಿಂದ ಕರೆಗಳು ಬಂದಲ್ಲಿ ಅವುಗಳಿಗೆ ತಕ್ಷಣವೇ ಸ್ಪಂದಿಸುವ ಕಾರ್ಯವಾಗಬೇಕು ಎಂದರು.

ಜಿಲ್ಲಾಧಿಕಾರಿ ವೈಶಾಲಿ ಎಂ.ಎಲ್ ಮಾತನಾಡಿ, ನೀರಿನ ಸಮಸ್ಯೆಯಿರುವ ಜಿಲ್ಲೆಯ 14 ಗ್ರಾಮಗಳಲ್ಲಿ ಟ್ಯಾಂಕರ್ ಮೂಲಕ ನೀರು ಪೂರೈಸಲಾಗುತ್ತಿದೆ. ಗದಗ-ಬೆಟಗೇರಿ ನಗರಸಭೆಯ 35 ವಾರ್ಡುಗಳಲ್ಲಿ ಟ್ಯಾಂಕರ್ ಮೂಲಕ ಕುಡಿಯುವ ನೀರು ಪೂರೈಕೆ ಮಾಡಲಾಗುತ್ತಿದೆ. ಗದಗ ತಾಲೂಕಿನಲ್ಲಿ 13, ಮುಂಡರಗಿ ತಾಲೂಕಿನಲ್ಲಿ 8, ನರಗುಂದ ತಾಲೂಕಿನಲ್ಲಿ 2, ಶಿರಹಟ್ಟಿ ತಾಲೂಕಿನಲ್ಲಿ 4 ಖಾಸಗಿ ಬೋರ್‌ವೆಲ್‌ಗಳ ಮುಖಾಂತರ ನೀರಿನ ಸಮಸ್ಯೆಯಿರುವ ಪ್ರದೇಶಗಳಿಗೆ ನೀರು ಪೂರೈಸಲಾಗುತ್ತಿದೆ ಎಂದು ಸಭೆಗೆ ವಿವರಿಸಿದರು.

ಗುಡುಗು, ಸಿಡಿಲು, ಮಳೆ ಮುಂಜಾಗ್ರತೆ ಕುರಿತು ಜಾಗೃತಿ ಮೂಡಿಸಲಾಗುತ್ತಿದೆ. ವಾಟ್ಸ್‌ಅಪ್ ಗ್ರೂಪ್‌ಗಳಿಗೆ ಸಂದೇಶಗಳನ್ನು ಹಂಚಿಕೊಳ್ಳಲಾಗುತ್ತಿದೆ. ಜಿಲ್ಲೆಯ 7 ಕಡೆಗಳಲ್ಲಿ ಮೇವು ಬ್ಯಾಂಕ್‌ಗಳನ್ನು ತೆರೆಯಲಾಗಿದ್ದು, ಜಾನುವಾರುಗಳಿಗೆ 210512 ಟನ್‌ನಷ್ಟು ಮೇವು ಲಭ್ಯವಿದೆ ಎಂದು ಸಭೆಗೆ ಮಾಹಿತಿ ನೀಡಿದರು.

ಜಂಟಿ ಕೃಷಿ ನಿರ್ದೇಶಕಿ ತಾರಾಮಣಿ ಮಾತನಾಡಿ, ಬರ ಪರಿಹಾರ ವಿತರಣೆ ಮಾಡುವಾಗ ಪ್ರತಿಯೊಬ್ಬ ರೈತರ ಹೊಲದಲ್ಲಿಯೂ ಕ್ರಾಪ್ ಸರ್ವೇ (ಬೆಳೆ ಸಮೀಕ್ಷೆ) ಲಿಂಕ್ ಮಾಡಲಾಗಿದೆ. 5591 ಫಲಾನುಭವಿಗಳ ಆಧಾರ್ ಮತ್ತು ಬ್ಯಾಂಕ್ ಖಾತೆ, ಫ್ರೂಟ್ಸ್ ಐಡಿಗಳಲ್ಲಿ ಹೆಸರಿನ ವ್ಯತ್ಯಾಸ ಮತ್ತು ಇತರೆ ಕಾರಣದಿಂದಾಗಿ ಪರಿಹಾರ ಜಮೆ ಆಗದೇ ಇದ್ದು, ಅವುಗಳನ್ನು ಸರಿಪಡಿಸುವ ಕಾರ್ಯ ಪ್ರಗತಿಯಲ್ಲಿದೆ. 2023ರ ಮುಂಗಾರು ಹಂಗಾಮಿನಲ್ಲಿ ಮಳೆ ಕೊರತೆಯಿಂದ ಕೃಷಿ ಹಾಗೂ ತೋಟಗಾರಿಕೆ ಬೆಳೆಗಳ ಹಾನಿಗೆ ಒಟ್ಟಾರೆ 1,13,778 ಫಲಾನುಭವಿಗಳಿಗೆ 1ರಿಂದ 9 ಹಂತದವರೆಗೆ 22 ಕೋಟಿ ರೂ ಬೆಳೆ ಹಾನಿ ಪರಿಹಾರ ಧನ ವಿತರಿಸಲಾಗಿದೆ. ಜಿಲ್ಲೆಯಲ್ಲಿ ಬೆಳೆ ಹಾನಿ ಪರಿಹಾರ ವಿತರಣೆ ಕಾರ್ಯ ಇನ್ನೂ ಪ್ರಗತಿಯಲ್ಲಿದೆ ಎಂದು ವಿವರಿಸಿದರು.

ಸಭೆಯಲ್ಲಿ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಭರತ್ ಎಸ್, ಉಪ ಅರಣ್ಯ ಸಂರಕ್ಷಣಾಧಿಕಾರಿ ಲೇಖರಾಜ, ಹೆಚ್ಚುವರಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಸಂಕದ, ಅಪರ ಜಿಲ್ಲಾಧಿಕಾರಿ ಸುರೇಖಾ, ಉಪವಿಭಾಗಾಧಿಕಾರಿ ವೆಂಕಟೇಶ ನಾಯಕ, ನಗರಾಭಿವೃದ್ಧಿ ಕೋಶದ ಯೋಜನಾ ನಿರ್ದೇಶಕ ಮಾರುತಿ ಬ್ಯಾಕೋಡ್, ನಗರಸಭೆ ಪೌರಾಯುಕ್ತರಾದ ಪ್ರಶಾಂತ ವರಗಪ್ಪನವರ, ಗ್ರಾಮೀಣಾಭಿವೃದ್ಧಿ ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗದ ಕಾರ್ಯಪಾಲಕ ಅಭಿಯಂತರ ಎಸ್.ಆರ್. ಗೌಡರ, ನಗರಸಭೆ ಸಹಾಯಕ ಕಾರ್ಯಪಾಲಕ ಅಭಿಯಂತರ ಹುಚ್ಚೇಶ್ವರ ಬಂಡಿವಡ್ಡರ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿ ಡಾ. ಎಸ್.ಎಸ್. ನೀಲಗುಂದ ಸೇರಿದಂತೆ ಸ್ಥಳೀಯ ಸಂಸ್ಥೆಗಳ ಮುಖ್ಯಾಧಿಕಾರಿಗಳು, ವಿವಿಧ ಇಲಾಖೆಯ ಅಧಿಕಾರಿಗಳು ಹಾಜರಿದ್ದರು.

ಅತಿವೃಷ್ಟಿ

ಹವಾಮಾನ ವರದಿಯ ಪ್ರಕಾರ ಮುಂಬರುವ ದಿನಗಳಲ್ಲಿ ಅತಿವೃಷ್ಟಿಯಾಗುವ ಸಂಭವವಿದೆ. ಈ ನಿಟ್ಟಿನಲ್ಲಿ ಅಧಿಕಾರಿಗಳು ಮುಂಜಾಗ್ರತಾ ಕ್ರಮವಾಗಿ ಅತಿವೃಷ್ಟಿ ನಿರ್ವಹಣೆಗೆ ಸರಿಯಾಗಿ ಕ್ರಿಯಾಯೋಜನೆ ಸಿದ್ಧಪಡಿಸಿಕೊಂಡು ಅತಿವೃಷ್ಟಿ ಆವರಿಸಿದಲ್ಲಿ ತಕ್ಷಣವೇ ಸ್ಪಂದಿಸುವ ಕಾರ್ಯಕೈಗೊಳ್ಳಬೇಕು. ಜೀವ ಹಾನಿ ತಡೆಗೆ ಮುಂಜಾಗೃತೆಯಾಗಿ ಅಗತ್ಯ ಕ್ರಮಗಳನ್ನು ಕೈಗೊಳ್ಳುವಂತೆಯೂ ಸಹ ಸಭೆಯಲ್ಲಿ ಸೂಚಿಸಲಾಯಿತು.

ಚರಂಡಿಗಳ ಸ್ವಚ್ಛತೆಗೆ ಸೂಚನೆ

ಗ್ರಾಮೀಣ ಪ್ರದೇಶ ಸೇರಿದಂತೆ ನಗರ ಪ್ರದೇಶಗಳಲ್ಲಿ ಗಟಾರುಗಳಲ್ಲಿ ನೀರು ಸರಾಗವಾಗಿ ಹರಿದುಹೋಗುವಂತೆ ಸ್ವಚ್ಛಗೊಳಿಸಲು ಕ್ರಮ ಕೈಗೊಳ್ಳಬೇಕು. ಇಲ್ಲದಿದ್ದಲ್ಲಿ ನೀರು ಸರಾಗವಾಗಿ ಹರಿದು ಹೋಗದೇ ರಸ್ತೆ ಮೇಲೆ ಕೊಳಚೆ ನೀರು ಹರಿಯುವ ಸಾಧ್ಯತೆಯಿದೆ. ಇದರಿಂದ ಸಾರ್ವಜನಿಕರಿಗೆ ಓಡಾಡಲು ಸಮಸ್ಯೆ ಉಂಟಾಗುತ್ತದೆ. ಈ ನಿಟ್ಟಿನಲ್ಲಿ ಮುಂಜಾಗ್ರತಾ ಕ್ರಮವಾಗಿ ನಗರದ ಗಟಾರುಗಳ ಸ್ವಚ್ಛತೆಗೆ ಕ್ರಮ ವಹಿಸಬೇಕು ಎಂದು ಸ್ಥಳೀಯ ಸಂಸ್ಥೆಗಳ ಮುಖ್ಯಸ್ಥರಿಗೆ ಸಚಿವರು ನಿರ್ದೇಶನ ನೀಡಿದರು.

ಅನುದಾನದ ಕೊರತೆಯಿಲ್ಲ

ಜಿಲ್ಲೆಯಲ್ಲಿ ಬರ ನಿರ್ವಹಣೆಗೆ ಹಾಗೂ ಸಮರ್ಪಕ ಕುಡಿಯುವ ನೀರು ಪೂರೈಸಲು ಅನುದಾನದ ಕೊರತೆಯಿಲ್ಲ. ಅಧಿಕಾರಿಗಳು ಅಗತ್ಯವಿದ್ದಲ್ಲಿ ಸಾರ್ವಜನಿಕರಿಗೆ ಕುಡಿಯುವ ನೀರು ಪೂರೈಕೆಗೆ ಖಾಸಗಿ ಬೋರ್‌ವೆಲ್, ಟ್ಯಾಂಕರ್ ಬಳಸಿಕೊಳ್ಳಲು ತಿಳಿಸಲಾಗಿದೆ. ಬರ ನಿರ್ವಹಣೆಗೆ ಅನುದಾನ ಕೊರತೆಯಿಲ್ಲ. ಅಧಿಕಾರಿಗಳು ಬರ ನಿರ್ವಹಣೆಯನ್ನು ಸಮರ್ಪಕವಾಗಿ ನಿಭಾಯಿಸುವಲ್ಲಿ ಬೇಜವಾಬ್ದಾರಿ ಹಾಗೂ ನಿಧಾನಗತಿ ಸಹಿಸಲಾಗದು ಎಂದು ಸಚಿವ ಎಚ್.ಕೆ. ಪಾಟೀಲ ಎಚ್ಚರಿಸಿದರು.

ರೋಣ ಬ್ಲಾಕ್ ಕಾಂಗ್ರೆಸ್ ಕಾರ್ಯಕರ್ತರಿಂದ ಸಚಿವರಿಗೆ ಮನವಿ

ಎಲ್ಲ ರೈತರಿಗೂ ಬರ ಪರಿಹಾರ ಒದಗಿಸಿ

■ ವಿಜಯಸಾಕ್ಷಿ ಸುದ್ದಿ, ಗದಗ

ಕೇಂದ್ರ ಸರಕಾರ ನೀಡಿರುವ ಬರ ಪರಿಹಾರ ಹಣವನ್ನು ಎಲ್ಲ ರೈತರಿಗೂ ಸಮನಾಗಿ ಹಂಚಿಕೆ ಮಾಡಬೇಕು ಎಂದು ಒತ್ತಾಯಿಸಿ ರೋಣ ಬ್ಲಾಕ್ ಕಾಂಗ್ರೆಸ್ ಕಾರ್ಯಕರ್ತರು ಸೋಮವಾರ ಜಿಲ್ಲಾಡಳಿತ ಭವನದಲ್ಲಿ ಜಿಲ್ಲಾ ಉಸ್ತುವಾರಿ ಸಚಿವ ಎಚ್.ಕೆ. ಪಾಟೀಲರಿಗೆ ಮನವಿ ಸಲ್ಲಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಕಾಂಗ್ರೆಸ್ ಮುಖಂಡ ಆರ್.ಎಸ್. ಪಾಟೀಲ, ರಾಜ್ಯದ ಪ್ರತಿಯೊಬ್ಬ ರೈತನೂ ಬರದಿಂದ ತತ್ತರಿಸಿದ್ದಾನೆ. ಬರ ಕಾರಣಕ್ಕೆ ಕೆಲ ರೈತರು ಬಿತ್ತನೆ ಮಾಡಿಲ್ಲ. ಹೀಗಾಗಿ ಅವರನ್ನು ಅನರ್ಹ ಎಂದು ಪರಿಗಣಿಸಲು ಸಾಧ್ಯವಿಲ್ಲ. ಬಿತ್ತನೆ ಮಾಡಲಿ, ಮಾಡದಿರಲಿ, ಜಮೀನು ಇರುವ ಪ್ರತಿಯೊಬ್ಬ ರೈತನಿಗೂ ಪರಿಹಾರ ಸಿಗಬೇಕು ಎಂದು ಒತ್ತಾಯಿಸಿದರು.

▸▸ 3ನೇ ಪುಟಕ್ಕೆ

ವರ್ಷಾಸನೆ ಸಂಪ್ರದಾಯ ನೆರವೇರಿಸಿದ ಶ್ರೀ ಫಕೀರ ಸಿದ್ಧರಾಮ ಜಗದ್ಗುರುಗಳು

ಶ್ರೀಮಠದ ಜಾತ್ರೆಯಲ್ಲಿ ಎಲ್ಲರೂ ಪಾಲ್ಗೊಳ್ಳಿ

■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಮೇ 23ರಿಂದ 2 ದಿನಗಳ ಕಾಲ ನಡೆಯುವ ಶಿರಹಟ್ಟಿಯ ಶ್ರೀ ಫಕ್ಕೀರೇಶ್ವರ ಮಠದ ಜಾತ್ರೆಯ ಅಂಗವಾಗಿ ಭಾನುವಾರ ಶಿರಹಟ್ಟಿ ಸಂಸ್ಥಾನ ಮಠದ ಶ್ರೀ ಫಕೀರ ಸಿದ್ಧರಾಮ ಜಗದ್ಗುರುಗಳು ಲಕ್ಷ್ಮೇಶ್ವರದ ಭಕ್ತರ ಮನೆಗೆ ಅಶ್ವಾರೂಢರಾಗಿ ಆಗಮಿಸಿ ಆಶೀರ್ವದಿಸಿ ಭಕ್ತರಿಂದ ಕಾಣಿಕೆ ಪಡೆಯುವ ವರ್ಷಾಸನೆ ಸಂಪ್ರದಾಯ ನೆರವೇರಿಸಿದರು.

ಹಿಂದೂ-ಮುಸ್ಲಿಂ ಭಾವೈಕ್ಯತೆಯ ಕೇಂದ್ರವಾಗಿರುವ ಶಿರಹಟ್ಟಿ ಫಕೀರೇಶ್ವರ ಮಠದಿಂದ ಜಾತ್ರೆಯ ಮುನ್ನಾದಿನ ಪಟ್ಟಣಕ್ಕೆ ವರ್ಷಾಸನೆಗೆ ಬರುವ ಸಾಂಪ್ರಯದಂತೆ ಶ್ರೀ ಫಕೀರ ಸಿದ್ಧರಾಮ ಜಗದ್ಗುರುಗಳು ಆನೆ, ಛತ್ರ, ಚಾಮರ ವಾದ್ಯಗಳೊಂದಿಗೆ ಮೆರವಣಿಗೆಯ ಮೂಲಕ ಭಕ್ತರ ಮನೆಗಳಿಗೆ ಭೇಟಿ ನೀಡಿ, ಕಾಣಿಕೆ, ಧವಸ-ಧಾನ್ಯಗಳನ್ನು ಸ್ವೀಕರಿಸಿ ಆಶೀರ್ವದಿಸಿ ಶ್ರೀಮಠದ ಜಾತ್ರೆಗೆ ಬರುವಂತೆ ಕೋರಿದರು.

▸▸ 4ನೇ ಪುಟಕ್ಕೆ

ಸರಕಾರದ ಒಂದು ವರ್ಷದ ಸಾಧನೆಗೆ ಜೆಡಿಎಸ್ ರಾಜ್ಯ ವಕ್ತಾರ ವೆಂಕನಗೌಡ ಗೋವಿಂದಗೌಡ್ರ ಕಿಡಿ

ಕಾಂಗ್ರೆಸ್ ಆಡಳಿತದಲ್ಲಿ ಅಪರಾಧ ಪ್ರಕರಣಗಳ ಏರಿಕೆ

■ ವಿಜಯಸಾಕ್ಷಿ ಸುದ್ದಿ, ಗದಗ

ಕ್ರೈಂ, ಕಮಿಷನ್ ಮತ್ತು ಕರಪ್ಷನ್ ರಾಜ್ಯದ ಕಾಂಗ್ರೆಸ್ ಸರಕಾರದ ಒಂದು ವರ್ಷದ ಸಾಧನೆಯಾಗಿದೆ ಎಂದು ಜೆಡಿಎಸ್ ರಾಜ್ಯ ವಕ್ತಾರ ವೆಂಕನಗೌಡ ಗೋವಿಂದಗೌಡ್ರ ಆರೋಪಿಸಿದರು.

ಸೋಮವಾರ ನಗರದ ಪತ್ರಿಕಾ ಭವನದಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಕಾಂಗ್ರೆಸ್ ನೇತೃತ್ವದ ಸರಕಾರ ಅಧಿಕಾರಕ್ಕೆ ಬಂದ ನಂತರ ರಾಜ್ಯದಲ್ಲಿ ಅಪರಾಧ ಪ್ರಕರಣಗಳು ಹೆಚ್ಚಾಗಿವೆ. ಕಮಿಷನ್ ಮತ್ತು ಕರಪ್ಷನ್ (ಭ್ರಷ್ಟಾಚಾರ) ಮಿತಿಮೀರಿದೆ. ಅದರ ಜೊತೆಗೆ ಸಾಲ, ಸುಳ್ಳು ಮತ್ತು ಸಾವುಗಳೂ ಏರಿಕೆಯಾಗಿವೆ ಎಂದು ವಾಗ್ದಾಳಿ ನಡೆಸಿದರು.

ಕಾಂಗ್ರೆಸ್ ಅಧಿಕಾರಕ್ಕೆ ಬಂದ ನಂತರ ಬೆಂಗಳೂರಲ್ಲಿ ಬಾಂಬ್ ಬ್ಲಾಸ್ಟ್, ಹುಬ್ಬಳ್ಳಿಯಲ್ಲಿ ನೇಹಾ, ಅಂಜಲಿ ಕೊಲೆಯಾಯಿತು. ಅಧಿವೇಶನ ಸಂದರ್ಭದಲ್ಲಿ ಬೆಳಗಾವಿಯಲ್ಲಿ ಮಹಿಳೆಯನ್ನು ವಿವಸ್ತ್ರಗೊಳಿಸಿದ ಘಟನೆ ನಡೆಯಿತು. ಶಿವಮೊಗ್ಗದಲ್ಲಿ ಗ್ಯಾಂಗ್ ವಾರ್ ಹೀಗೆ ಹತ್ತಾರು ಘಟನೆಗಳು ನಡೆದಿದೆ. ಇದಕ್ಕೆಲ್ಲಾ ಕಾಂಗ್ರೆಸ್ ಸರಕಾರದ ವೈಫಲ್ಯಗಳೇ ಕಾರಣವಾಗಿದೆ. ಇದೇ ಕಾಂಗ್ರೆಸ್ ಸರಕಾರದ ವರ್ಷದ ಸಾಧನೆ ಎಂದು ಲೇವಡಿ ಮಾಡಿದರು.

ಗ್ಯಾರಂಟಿ ಕಾರ್ಯಕ್ರಮಗಳ ಬಗ್ಗೆ ಮಾತನಾಡುವ ರಾಜ್ಯ ಸರಕಾರ ಸುಳ್ಳು ಅಂಕಿ-ಸಂಖ್ಯೆಗಳನ್ನು ಕೊಟ್ಟು ಜನರನ್ನು ದಿಕ್ಕು ತಪ್ಪಿಸುವ ಕೆಲಸ ಮಾಡುತ್ತಿದೆ. ರಾಜ್ಯದ ಜನಸಂಖ್ಯೆ 6 ಕೋಟಿ ಇದೆ. ಆ ಪೈಕಿ 4.90 ಕೋಟಿ ಜನ ಗ್ಯಾರಂಟಿ ಫಲಾನುಭವಿಗಳಿದ್ದಾರೆ ಎನ್ನುವುದು ಇದಕ್ಕೆ ಸಾಕ್ಷಿಯಾಗಿದೆ. ಸಮೀಕ್ಷೆ ಪ್ರಕಾರ ಕೇವಲ 1.20 ಕೋಟಿ ಜನರಿಗೆ ಮಾತ್ರ ಗ್ಯಾರಂಟಿ ಯೋಜನೆಗಳು ತಲುಪಿವೆ. ಒಂದೆಡೆ ಮನೆಗಳಿಗೆ ಉಚಿತ ವಿದ್ಯುತ್ ಕೊಟ್ಟು, ಅದೇ ಮನೆಯ ಯಜಮಾನ ಕೆಲಸ ಮಾಡುವ ಅಂಗಡಿಯ ವಿದ್ಯುತ್ ದರ ಏರಿಕೆ ಮಾಡಿದ್ದಾರೆ. ಈ ರೀತಿ ಮಾಡಿದರೆ ಗ್ಯಾರಂಟಿ ಯೋಜನೆಯ ಲಾಭವಾದರೂ ಏನು ಎಂದು ಪ್ರಶ್ನಿಸಿದರು.

ಸುದ್ದಿಗೋಷ್ಠಿಯಲ್ಲಿ ಜೆಡಿಎಸ್ ಮುಖಂಡರಾದ ಗಿರೀಶ ಸಂಶಿ, ಬಸವರಾಜ ಅಪ್ಪಣ್ಣವರ, ಜೋಸೆಫ್ ಉದೋಜಿ, ಎಂ.ಎಸ್. ಪರ್ತಗೌಡ್ರ, ಪ್ರಫುಲ್ ಪುಣೇಕರ್, ತಿಪ್ಪಣ್ಣ ಹುಡೇದ, ಕೆ.ಎಫ್. ದೊಡ್ಡಮನಿ ಇದ್ದರು.

ಪ್ರಜ್ವಲ್ ರೇವಣ್ಣ ಪ್ರಕರಣದಲ್ಲಿ ಜೆಡಿಎಸ್ ಸಂತ್ರಸ್ಥರ ಬಗ್ಗೆ ಮಾತನಾಡುವುದಿಲ್ಲ ಎಂದು ಆರೋಪಿಸಲಾಗುತ್ತಿದೆ. ಸಂತ್ರಸ್ಥರ ಬಗ್ಗೆ ಮಾತನಾಡಿದರೆ ಅವರ ಮಾನಹಾನಿಯಾಗುತ್ತದೆ ಎನ್ನುವ ಕಾರಣಕ್ಕೆ ಜೆಡಿಎಸ್ ಮೌನವಾಗಿದೆ. ಆದರೆ ಸಂತ್ರಸ್ಥರಿಗೆ ನ್ಯಾಯ ಸಿಗಲೇಬೇಕು ಎಂದ ಅವರು, ಪ್ರಜ್ವಲ್ ರೇವಣ್ಣ ದೇಶಬಿಟ್ಟು ಹೋಗಲು ಸರಕಾರವೇ ಕಾರಣ. ಅದೇ ರೀತಿ ಶಿವರಾಮೇಗೌಡ ಅವರಿಗೆ ನೋಟಿಸ್ ಕೊಡುವ ಕೆಲಸ ಮಾಡಿಲ್ಲ ಎಂದು ಸರಕಾರದ ವಿರುದ್ಧ ವಾಗ್ದಾಳಿ ನಡೆಸಿದರು.

ನಿವೃತ್ತ ಸೈನಿಕನಿಗೆ ಅದ್ದೂರಿ ಸ್ವಾಗತ

■ ವಿಜಯಸಾಕ್ಷಿ ಸುದ್ದಿ, ಲಕ್ಕುಂಡಿ

ಭಾರತೀಯ ಸೇನೆಯಲ್ಲಿ 24 ವರ್ಷ ಸೇವೆ ಸಲ್ಲಿಸಿ ನಿವೃತ್ತಿ ಹೊಂದಿದ ಗ್ರಾಮದ ಸೈನಿಕ ಸಂಜೀವಕುಮಾರ ಚಿಮ್ಮನಕಟ್ಟಿ ಅವರನ್ನು ಗ್ರಾಮಸ್ಥರು ಅದ್ದೂರಿಯಾಗಿ ಸ್ವಾಗತಿಸಿದರು. ಗ್ರಾಮದ ಭೀಮಾಂಬಿಕಾ ದೇವಸ್ಥಾನದಿಂದ ವಿರುಪಾಕ್ಷೇಶ್ವರ ದೇವಸ್ಥಾನದವರೆಗೂ ನಿವೃತ್ತ ಸೈನಿಕನನ್ನು ಮೆರವಣಿಗೆ ಮಾಡಲಾಯಿತು. ತಳಿರು ತೋರಣಗಳಿಂದ ಸಿಂಗರಿಸಿದ್ದ ತೆರೆದ ವಾಹನದಲ್ಲಿ ಮೆರವಣಿಗೆ ಮಾಡಿ, ಮಹಿಳೆಯರು ಆರತಿ ಬೆಳಗಿ ಬರಮಾಡಿಕೊಂಡರು.

ಕಳೆದ 24 ವರ್ಷಗಳ ಕಾಲ ಜಮ್ಮು ಕಾಶ್ಮೀರ, ರಾಜಸ್ತಾನ, ಅರುಣಾಚಲ ಪ್ರದೇಶ, ಪಶ್ಚಿಮ ಬಂಗಾಳ, ಗುಜರಾತ್, ತ್ರೀವೇಂದ್ರಮ್ ರಾಜ್ಯಗಳ ವಿವಿಧ ಗಡಿಗಳಲ್ಲಿ ದೇಶದ ಭದ್ರತೆ ಮತ್ತು ರಕ್ಷಣೆಯಲ್ಲಿ ಅಮೋಘ ಸೇವೆ ಸಲ್ಲಿಸಿರುವ ಸಂಜೀವಕುಮಾರ ಅವರ ನಿವೃತ್ತ ಜೀವನ ಸುಖಕರವಾಗಿರಲಿ, ಮುಂದೆ ಸೈನಿಕ ಸೇವೆ ಬಯಸುವ ಯುವಕರಿಗೆ ಅವರ ಮಾರ್ಗದರ್ಶನ ಸಿಗಲಿ ಎಂದು ಕಾರ್ಯಕ್ರಮದ ಸಾನಿಧ್ಯ ವಹಿಸಿದ್ದ ಸಿದ್ಧಲಿಂಗೇಶ್ವರ ಶ್ರೀಗಳು, ಪ್ರಾಚಾರ್ಯರಾದ ನೀಲಕಂಠ ಮುಕ್ಕಣ್ಣವರ, ಮಾಜಿ ಸೈನಿಕ ದತ್ತಾತ್ರೇಯ ಜೋಶಿ ಸೇರಿದಂತೆ ಮಾಜಿ ಸೈನಿಕರು ಹಾರೈಸಿದರು. ಸಂಜೀವಕುಮಾರ ದಂಪತಿಯನ್ನು ಗ್ರಾಮದ ವತಿಯಿಂದ ಸನ್ಮಾನಿಸಲಾಯಿತು.

ಗ್ರಾ.ಪಂ ಸದಸ್ಯ ಮಂಜುನಾಥ ಗುಡಸಲಮನಿ, ಹನುಮಂತಪ್ಪ ವಿಠೋಜಿ, ರವಿಚಂದ್ರ ಅಬ್ಬಿಗೇರಿ ಸೇರಿದಂತೆ ಮಾಜಿ ಸೈನಿಕ ಬಳಗದವರು ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದರು.

ಶೈಕ್ಷಣಿಕ ಪುನಶ್ಚೇತನ ಶಿಬಿರ ಇಂದಿನಿಂದ

■ ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ಹಾಲಕೆರೆ ಅನ್ನದಾನೇಶ್ವರ ಸಂಸ್ಥಾನ ಮಠದ ಅಕ್ಷರ ಭಾರತ ಪ್ರತಿಷ್ಠಾನ ಗದಗ ಹಾಗೂ ನರೇಗಲ್ಲ ಪಟ್ಟಣದ ಅನ್ನದಾನ ವಿಜಯ ವಿದ್ಯಾ ಪ್ರಸಾರಕ ಸಮಿತಿಯ ಆಶ್ರಯದಲ್ಲಿ ಅನ್ನದಾನ ವಿಜಯ ವಿದ್ಯಾ ಪ್ರಸಾರಕ

ಸಂಪಾದಕೀಯ

ಹೊರಗುತ್ತಿಗೆ ನೇಮಕಾತಿಯಲ್ಲೂ ಮೀಸಲು ನಿರ್ಧಾರ ಸ್ವಾಗತಾರ್ಹ

ರಾಜ್ಯ ಸರಕಾರ ಹೊರಗುತ್ತಿಗೆ ನೇಮಕಾತಿಯಲ್ಲೂ ಮೀಸಲಾತಿ ಅಳವಡಿಸುವ ಕುರಿತು ಸ್ಪಷ್ಟ ಆದೇಶ ಜಾರಿಗೊಳಿಸಿದೆ. ಹೊರಗುತ್ತಿಗೆ ನೇಮಕಾತಿಯಲ್ಲೂ ಮೀಸಲಾತಿ ಜಾರಿಗೊಳಿಸುವ ಸಂಬಂಧ ವರ್ಷದ ಹಿಂದೆಯೆ ಪ್ರಕ್ರಿಯೆಗಳು ಆರಂಭವಾಗಿದ್ದವು. ಸದ್ಯ ಅದು ಕಾರ್ಯರೂಪಕ್ಕೆ ಬರುವುದು ನಿಶ್ಚಯವಾಗಿದ್ದು ಉತ್ತಮ ನಿರ್ಧಾರವಾಗಿದೆ.

ಈ ಬಗ್ಗೆ ಸರಕಾರದ ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆಯ ಕಾರ್ಯದರ್ಶಿ ರಂದೀಪ್ ಡಿ. ಅಧಿಕೃತ ಸುತ್ತೋಲೆ ಹೊರಡಿಸಿದ್ದು, ರಾಜ್ಯದ ವಿವಿಧ ಇಲಾಖೆಗಳಲ್ಲಿ ಹೊರಗುತ್ತಿಗೆ ನೇಮಕಾತಿಗಳಲ್ಲಿ ಶೇ. 33ರಷ್ಟು ಹುದ್ದೆಗಳು ಮಹಿಳೆಯರಿಗೆ ಮೀಸಲಿಡುವುದು ಸೇರಿದಂತೆ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಹಿಂದುಳಿದವರಿಗೆ ಮೀಸಲಾತಿ ಅನ್ವಯ ಅವಕಾಶ ಕೊಡಬೇಕು ಎನ್ನುವ ಮಾರ್ಗಸೂಚಿಯನ್ನೂ ನೀಡಿದ್ದಾರೆ.

ಸರಕಾರದ ಈ ನಿರ್ಧಾರದಿಂದಾಗಿ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಮಾತ್ರವಲ್ಲದೇ ನಿರುದ್ಯೋಗಿ ಯುವತಿಯರಿಗೂ ಕೆಲಸ ಸಿಗುವ ವಿಶ್ವಾಸ ಮೂಡಿಸಿದೆ. ಸರಕಾರ ಖಾಯಂ ನೇಮಕಾತಿ ಬಹುತೇಕ ಸ್ಥಗಿತಗೊಳಿಸಿದೆ. ಅನೇಕ ಹುದ್ದೆಗಳನ್ನು ಹೊರಗುತ್ತಿಗೆ ಸಿಬ್ಬಂದಿ ಮೂಲಕವೇ ನಿರ್ವಹಿಸುವ ನಿರ್ಧಾರಕ್ಕೆ ಬಂದಿದೆ. ಯಾವುದೇ ಪಕ್ಷದ ಸರಕಾರ ಇರಲಿ, ಭವಿಷ್ಯದಲ್ಲಿ ನೇಮಕಾತಿಗಳ ಸಂಖ್ಯೆ ಕ್ಷೀಣಿಸುವುದಂತು ನಿಜ. ಹೀಗಾಗಿ ಸರಕಾರಿ ಉದ್ಯೋಗದ ಕನಸು ಕಾಣುತ್ತಿರುವವರಿಗೆ ಕನಿಷ್ಠ ಹೊರಗುತ್ತಿಗೆ ಕೆಲಸವಾದರೂ ಸಿಗುವಂತಾಗಲಿ.

ಸರಕಾರ ಹೊರಗುತ್ತಿಗೆ ನೇಮಕಾತಿಯಲ್ಲಿ ಮೀಸಲಾತಿ ಘೋಷಣೆ ಮಾಡಿದಂತೆ ಹೊರಗುತ್ತಿಗೆ ನೌಕರರಿಗೂ ಕನಿಷ್ಠ ವೇತನ ಸಿಗುವಂತೆ ಮಾಡಬೇಕಿದೆ. ಉದ್ಯೋಗ ಕೊಡುವ ಏಜೆನ್ಸಿಗಳ ದೌರ್ಜನ್ಯ ತಡೆಗೆ ಕಾನೂನು ತರಬೇಕಿದೆ. ಭವಿಷ್ಯ ನಿಧಿ, ಸೇವಾವಧಿ ಪರಿಗಣಿಸಿ ವೇತನ ಹೆಚ್ಚಳ ಮಾಡುವಂಥ ನಿರ್ಣಯಗಳನ್ನು ಕೈಗೊಳ್ಳಬೇಕಿದೆ. ಆ ನಿಟ್ಟಿನಲ್ಲಿ ಸರಕಾರ ಚಿಂತನೆ ನಡೆಸಬೇಕಿದೆ.

ಸದ್ಯ ಸರಕಾರದ ನಿರ್ಧಾರ ಸ್ವಾಗತಾರ್ಹವಾದರೂ, ಭವಿಷ್ಯದಲ್ಲಿ ಖಾಯಂ ನೇಮಕಾತಿ ಪ್ರಕ್ರಿಯೆ ಆರಂಭಿಸುವ ಬಗ್ಗೆಯೂ ಚಿಂತನೆ ನಡೆಸಬೇಕು. ಹೊರಗುತ್ತಿಗೆ ನೌಕರರು ಉತ್ತಮವಾಗಿ ಕಾರ್ಯನಿರ್ವಹಿಸಿದರೂ, ಸೇವಾಭದ್ರತೆ ಇಲ್ಲದ ಕಾರಣ ಕೆಲಸದ ಮೇಲೆ ವ್ಯತಿರಿಕ್ತ ಪರಿಣಾಮಗಳು ಉಂಟಾಗುತ್ತವೆ. ಜೊತೆಗೆ ಖಾಯಂ ನೌಕರರು ಹೊರಗುತ್ತಿಗೆ ಸಿಬ್ಬಂದಿಯನ್ನು ಕೀಳಾಗಿ ಕಾಣುವ ಮನಸ್ಥಿತಿ ಬದಲಾಗುವುದಿಲ್ಲ. ಇದೆಲ್ಲರದ ನೇರ ಪರಿಣಾಮ ಕೆಲಸದ ಮೇಲೆ ಆಗುತ್ತದೆ. ಹೀಗಾಗಿ ಸರಕಾರ ಸದ್ಯಕ್ಕೆ ಹೊರಗುತ್ತಿಗೆ ನೇಮಕಾತಿಯಲ್ಲಿ ಮೀಸಲಾತಿ ತಂದರೂ, ಭವಿಷ್ಯದಲ್ಲಿ ಖಾಯಂ ನೇಮಕಾತಿಗೆ ಹೆಚ್ಚಿನ ಆದ್ಯತೆ ಕೊಡಬೇಕಿದೆ.

ಆರ್‌ಸಿಬಿ ಅಭಿಮಾನಿಗಳಿಂದ ಗುಲಾಬಿ ವಿತರಿಸಿ ಸಂಭ್ರಮಾಚರಣೆ

■ ವಿಜಯಸಾಕ್ಷಿ ಸುದ್ದಿ, ಕೊಪ್ಪಳ

2024ರ ಐಪಿಎಲ್ ಪಂದ್ಯಾವಳಿಯ ಶನಿವಾರದ ಆರ್‌ಸಿಬಿ-ಸಿಎಸ್‌ಕೆ ತಂಡಗಳ ನಡುವೆ ನಡೆದ ಪಂದ್ಯದಲ್ಲಿ ರಾಯಲ್ ಚಾಲೆಂಜರ್ ಬೆಂಗಳೂರು ತಂಡ ಪವಾಡ ಎನ್ನುವ ರೀತಿಯಲ್ಲಿ ಚೆನ್ನೈ ಸೂಪರ್ ಕಿಂಗ್ಸ್ ತಂಡವನ್ನು ಮಣಿಸಿ ಕ್ವಾಲಿಫೈ ಹಂತ ತಲುಪಿದ್ದಕ್ಕೆ ಕೊಪ್ಪಳದ ಆರ್‌ಸಿಬಿ ಅಭಿಮಾನಿಗಳು ಜಿಲ್ಲಾ ಕ್ರೀಡಾಂಗಣದಲ್ಲಿ ಕ್ರೀಡಾಪಟುಗಳಿಗೆ ಗುಲಾಬಿ ಹೂ ನೀಡುವ ಮೂಲಕ ದ್ವೇಷ ಬಿಡಿ, ಪ್ರೀತಿ ಕೊಡಿ ಎಂದು ಸಂಭ್ರಮಿಸಿದರು. ಸಾಮಾನ್ಯವಾಗಿ ಪಟಾಕಿ ಸಿಡಿಸುವ ಮೂಲಕ ಸಂಭ್ರಮಿಸುವವರ ನಡುವೆ ಕೊಪ್ಪಳದ ಕ್ರೀಡಾಸಕ್ತ ಆರ್‌ಸಿಬಿ ಅಭಿಮಾನಿಗಳು ಹೂ ನೀಡಿ, ಚಹಾ-ಬಿಸ್ಕತ್ತು ವಿತರಿಸುವ ಮೂಲಕ ವಿಭಿನ್ನತೆ ಮೆರೆದರು.

ದೆಹಲಿ ಮೆಟ್ರೋದಲ್ಲಿ ಕೇಜ್ರಿವಾಲ್‌ಗೆ ಜೀವ ಬೆದರಿಕೆ ಬರಹ; 'ಪ್ರಧಾನಿ ಕಚೇರಿಯಲ್ಲಿ ಸಂಚು ರೂಪಿಸಲಾಗಿದೆ' ಎಂದ ಆಪ್

■ ವಿಜಯಸಾಕ್ಷಿ ಸುದ್ದಿ, ನವದೆಹಲಿ

ದೆಹಲಿ ಮುಖ್ಯಮಂತ್ರಿ ಅರವಿಂದ್ ಕೇಜ್ರಿವಾಲ್‌ಗೆ ಜೀವ ಬೆದರಿಕೆ ಹಾಕುವ ಬರಹವು ರಾಷ್ಟ್ರ ರಾಜಧಾನಿಯ ರಾಜೀವ್ ಚೌಕ್ ಮತ್ತು ಪಟೇಲ್ ನಗರ ಮೆಟ್ರೋ ನಿಲ್ದಾಣಗಳಲ್ಲಿ ಕಾಣಿಸಿಕೊಂಡಿದ್ದು, ಬಿಜೆಪಿ ವಿರುದ್ಧ ಆಮ್ ಆದ್ಮಿ ಪಕ್ಷದ (ಎಎಪಿ) ಮುಖಂಡರು ಆರೋಪ ಹೊರಿಸಿದೆ. 'ಪ್ರಧಾನಿ ನರೇಂದ್ರ ಮೋದಿ ಮತ್ತು ಬಿಜೆಪಿಯು ಮುಖ್ಯಮಂತ್ರಿಯ ಮೇಲೆ ದಾಳಿ ನಡೆಸಲು ಯೋಜಿಸುತ್ತಿದೆ' ಎಂದು ಹೇಳಿದೆ.

"ಅರವಿಂದ್ ಕೇಜ್ರಿವಾಲ್ ಮೇಲೆ ದಾಳಿಯ ಸಂಚು ಪ್ರಧಾನಿ ಕಚೇರಿಯಲ್ಲಿ (ಪಿಎಂಒ) ರೂಪಿಸಲಾಗಿದೆ" ಎಂದು ಎಎಪಿ ಸಂಸದ ಸಂಜಯ್ ಸಿಂಗ್ ಹೇಳಿದ್ದಾರೆ.

ದೆಹಲಿ ಮುಖ್ಯಮಂತ್ರಿ ಅರವಿಂದ್ ಕೇಜ್ರಿವಾಲ್‌ಗೆ ಜೀವ ಬೆದರಿಕೆ ಹಾಕುವ ಬರಹವು ರಾಷ್ಟ್ರ ರಾಜಧಾನಿಯ ರಾಜೀವ್ ಚೌಕ್ ಮತ್ತು ಪಟೇಲ್ ನಗರ ಮೆಟ್ರೋ ನಿಲ್ದಾಣಗಳಲ್ಲಿ ಕಾಣಿಸಿಕೊಂಡಿದ್ದು, ಬಿಜೆಪಿ ವಿರುದ್ಧ ಆಮ್ ಆದ್ಮಿ ಪಕ್ಷದ (ಎಎಪಿ) ಮುಖಂಡರು ಆರೋಪ ಹೊರಿಸಿದೆ. 'ಪ್ರಧಾನಿ ನರೇಂದ್ರ ಮೋದಿ ಮತ್ತು ಬಿಜೆಪಿಯು ಮುಖ್ಯಮಂತ್ರಿಯ ಮೇಲೆ ದಾಳಿ ನಡೆಸಲು ಯೋಜಿಸುತ್ತಿದೆ' ಎಂದು ಹೇಳಿದೆ.

"ಅರವಿಂದ್ ಕೇಜ್ರಿವಾಲ್ ಮೇಲೆ ದಾಳಿಯ ಸಂಚು ಪ್ರಧಾನಿ ಕಚೇರಿಯಲ್ಲಿ (ಪಿಎಂಒ) ರೂಪಿಸಲಾಗಿದೆ" ಎಂದು ಎಎಪಿ ಸಂಸದ ಸಂಜಯ್ ಸಿಂಗ್ ಹೇಳಿದ್ದಾರೆ. ಪ್ರಧಾನಿ ಮೋದಿ ಮತ್ತು ಬಿಜೆಪಿ ಅರವಿಂದ್ ಕೇಜ್ರಿವಾಲ್ ಅವರನ್ನು ದ್ವೇಷಿಸುತ್ತಿದೆ, ಅವರನ್ನು ಕೊಲ್ಲಲು ಸಂಚು ನಡೆಸುತ್ತಿದೆ ಎಂದು ಸಂಜಯ್ ಸಿಂಗ್ ಹೇಳಿದ್ದಾರೆ.

"ಪ್ರಧಾನಿ ನರೇಂದ್ರ ಮೋದಿ ಮತ್ತು ಬಿಜೆಪಿ ದ್ವೇಷ ಮತ್ತು ಸೇಡಿನಲ್ಲಿ ಮುಳುಗಿದ್ದಾರೆ, ಅವರು ಅರವಿಂದ್ ಕೇಜ್ರಿವಾಲ್ ಅವರನ್ನು ಕೊಲ್ಲಲು ಸಂಚು ಮಾಡುತ್ತಿದ್ದಾರೆ. ಅರವಿಂದ್ ಕೇಜ್ರಿವಾಲ್ ಅವರಿಗೆ ಪ್ರಧಾನಿ ಕಚೇರಿ, ಬಿಜೆಪಿ ಮತ್ತು ನರೇಂದ್ರ ಮೋದಿ ಅವರಿಂದ ಏನಾದರೂ ಸಂಭವಿಸಿದರೆ ಚುನಾವಣಾ ಆಯೋಗ ಜವಾಬ್ದಾರರಾಗಿರುತ್ತಾರೆ ಎಂದು ನಾನು ಹೇಳುತ್ತೇನೆ" ಎಂದರು.

ಅಜ್ಜಂಪುರ ತಾಲೂಕು 4ನೇ ಕನ್ನಡ ಸಾಹಿತ್ಯ ಸಮ್ಮೇಳನದಲ್ಲಿ ರಂಭಾಪುರಿ ಶ್ರೀಗಳು

ಕನ್ನಡ ಭಾಷೆಯ ಅಭಿವೃದ್ಧಿಯಾಗಲಿ

■ ವಿಜಯಸಾಕ್ಷಿ ಸುದ್ದಿ, ಅಜ್ಜಂಪುರ

ನಾಡು-ನುಡಿಗಳ ಬಗೆಗೆ ಎಲ್ಲರಲ್ಲಿ ಸ್ವಾಭಿಮಾನ ಬೆಳೆದುಬರುವ ಅವಶ್ಯಕತೆಯಿದೆ. ಸ್ವಾಭಿಮಾನ ಇಲ್ಲದಿದ್ದರೆ ಏನನ್ನೂ ಸಾಧಿಸಲು ಸಾಧ್ಯವಾಗದು. ಕರ್ನಾಟಕ ಹೆಸರಾಯಿತು, ಆದರೆ ಉಸಿರಾಗಬೇಕು ಕನ್ನಡ ಎಂದು ಬಾಳೆಹೊನ್ನೂರು ಶ್ರೀ ರಂಭಾಪುರಿ ಡಾ.ವೀರಸೋಮೇಶ್ವರ ಜಗದ್ಗುರುಗಳು ಅಭಿಪ್ರಾಯಪಟ್ಟರು.

ಅವರು ಭಾನುವಾರ ತಾಲೂಕಿನ ಕಾಟಿಗನೆರೆ ಗ್ರಾಮದಲ್ಲಿ ಜರುಗಿದ ಅಜ್ಜಂಪುರ ತಾಲೂಕು 4ನೇ ಕನ್ನಡ ಸಾಹಿತ್ಯ ಸಮ್ಮೇಳನ ಉದ್ಘಾಟನಾ ಸಮಾರಂಭದ ಸಾನ್ನಿಧ್ಯ ವಹಿಸಿ ಆಶೀರ್ವಚನ ನೀಡುತ್ತಿದ್ದರು.

ಹೆತ್ತ ತಂದೆ-ತಾಯಿಗಳು ತಮ್ಮ ಮಕ್ಕಳನ್ನು ಇಂಗ್ಲೀಷ್, ಕಾನ್ವೆಂಟ್ ಸ್ಕೂಲಿಗೆ ಕಳಿಸುವರೆಷ್ಟೋ ಜನರಿದ್ದಾರೆ. ಕನ್ನಡ ಶಾಲೆಯಲ್ಲಿ ಓದಲು ಮಕ್ಕಳಿಗೆ ಅವಕಾಶ ಕಲ್ಪಿಸಿಕೊಡಬೇಕು. ಈ ನಿಟ್ಟಿನಲ್ಲಿ ಕನ್ನಡ ಸಾಹಿತ್ಯ ಪರಿಷತ್ತು ಹಾಗೂ ಕನ್ನಡ ಪರ ಸಂಘಟನೆಗಳು ಪ್ರಾಮಾಣಿಕ ಪ್ರಯತ್ನ ಮಾಡಬೇಕಾಗಿದೆ. ಅಜ್ಜಂಪುರ ತಾಲೂಕು 4ನೇ ಕನ್ನಡ ಸಾಹಿತ್ಯ ಸಮ್ಮೇಳನ ಒಂದು ಸಣ್ಣ ಕಾಟಿಗನೆರೆ ಗ್ರಾಮದಲ್ಲಿ ಜರುಗುತ್ತಿರುವುದು ಸಂತೋಷದ ಸಂಗತಿ. ನಿವೃತ್ತ ಶಿಕ್ಷಕ ಜಿ.ಉಮಾಪತಿ ಆರಾಧ್ಯರ ಕನ್ನಡ ಭಾಷಾಭಿಮಾನ, ಚಿಂತನೆ ಈ ಸಮಾರಂಭಕ್ಕೆ ಸ್ಫೂರ್ತಿಯಾಗಿದೆ ಎಂದು ಶ್ರೀ ರಂಭಾಪುರಿ ಜಗದ್ಗುರುಗಳು ನುಡಿದರು.

ಕನ್ನಡ ನಾಡಿನಲ್ಲಿ ಕನ್ನಡ ಭಾಷೆ ಅಭಿವೃದ್ಧಿಪಡಿಸುವುದನ್ನು ಯಾರೂ ನಿರ್ಲಕ್ಷ್ಯ ಮಾಡಬಾರದು. ಕನ್ನಡ ನಾಡಿನಲ್ಲಿ ಕನ್ನಡ ಭಾಷೆ ಸೊರಗುತ್ತಿರುವುದು ನೋವಿನ ಸಂಗತಿ. ಕನ್ನಡ ಭಾಷೆಯಲ್ಲಿರುವ ಸೊಗಡು, ಸೌಂದರ್ಯ ಬೇರೆಲ್ಲಿಯೂ ಕಾಣಲಾಗದು. ಕರ್ನಾಟಕದ ಗಡಿ ಭಾಗಗಳಲ್ಲಿ ಕನ್ನಡ ಶಾಲೆಗಳು ಕ್ಷೀಣಿಸುತ್ತಿವೆ. ಅವುಗಳನ್ನು ಪುನಶ್ಚೇತನಗೊಳಿಸುವ ಕಾರ್ಯ ತ್ವರಿತವಾಗಿ ಆಗಬೇಕಾಗಿದೆ. ದಿನ ನಿತ್ಯದಲ್ಲಿ ಕನ್ನಡ ಬಳಕೆ ಕಲಿಕೆ ಹಾಗೂ ಪ್ರೋತ್ಸಾಹ ಸಿಗುವಂತಾಗಬೇಕು ಎಂದರು.

ಕನ್ನಡ ಅಭಿವೃದ್ಧಿ ಪ್ರಾಧಿಕಾರದ ಡಾ.ಸಂತೋಷ ಹಾನಗಲ್ ಸಮಾರಂಭ ಉದ್ಘಾಟಿಸಿದ ನಂತರ ಅವರಿಗೆ 'ಕನ್ನಡ ಶ್ರೀ' ಪ್ರಶಸ್ತಿ ಪ್ರದಾನ ಮಾಡಲಾಯಿತು. ಈ ಸಂದರ್ಭದಲ್ಲಿ ಡಾ.ಸಂತೋಷ ಹಾನಗಲ್ ಮಾತನಾಡಿ, ಕನ್ನಡ ನಾಡಿನಲ್ಲಿಯೇ ಕನ್ನಡಕ್ಕೆ ಪ್ರಾಧಾನ್ಯತೆ ದೊರೆಯದಿರುವುದು ಖೇದಕರ ಸಂಗತಿ. ರಾಜ್ಯ ಮತ್ತು ಕೇಂದ್ರ ಸರ್ಕಾರಗಳು ಕನ್ನಡಕ್ಕೆ ಇನ್ನೂ ಹೆಚ್ಚಿನ ಪ್ರಾಧಾನ್ಯತೆ ನೀಡುವ ಅವಶ್ಯಕತೆ ಇದೆ ಎಂದರು. ತಾವರೆಕೆರೆ ಡಾ.ಅಭಿನವ ಸಿದ್ಧಲಿಂಗ ಶಿವಾಚಾರ್ಯ ಸ್ವಾಮಿಗಳು ಮತ್ತು ಬೀರೂರು ರಂಭಾಪುರಿ ಶಾಖಾ ಮಠದ ರುದ್ರಮುನಿ ಶಿವಾಚಾರ್ಯ ಸ್ವಾಮಿಗಳು ಸಮ್ಮುಖ ವಹಿಸಿದ್ದರು.

ಸಮ್ಮೇಳನಾಧ್ಯಕ್ಷ ಎ.ಸಿ. ಚಂದ್ರಪ್ಪ ಮಾತನಾಡಿ, ಕನ್ನಡ ನಮ್ಮ ಹೆಮ್ಮೆ. ಕನ್ನಡ ನಾಡು-ನುಡಿಗಾಗಿ ಪ್ರತಿಯೊಬ್ಬರೂ ಶ್ರಮಿಸಬೇಕಾದ ಅವಶ್ಯಕತೆ ಇದೆ ಎಂದರು. ನಿವೃತ್ತ ಶಿಕ್ಷಕ ಜಿ.ಉಮಾಪತಿ ಆರಾಧ್ಯರು ಪ್ರಶಸ್ತಿ ಪ್ರದಾನ ಮಾಡಿದರು. ಜಿಲ್ಲಾ ಕಸಾಪ ಅಧ್ಯಕ್ಷ ಸೂರಿ ಶ್ರೀನಿವಾಸ ಆಶಯ ನುಡಿ ನುಡಿದರು. ತಾಲೂಕಾ ಕಸಾಪ ಅಧ್ಯಕ್ಷ ಹೆಚ್.ಆರ್. ಚಂದ್ರಪ್ಪ ಪ್ರಾಸ್ತಾವಿಕ ನುಡಿದರು.

ಮುಖ್ಯ ಅತಿಥಿಗಳಾಗಿ ಬಿ.ಪಿ. ಶಿವಮೂರ್ತಿ, ಚಿ.ಸ. ಪ್ರಭುಲಿಂಗಸಾಸ್ತ್ರಿ ಭಾಗವಹಿಸಿದ್ದರು. ನಿ.ಕಾರ್ಯನಿರ್ವಾಹಕ ಅಧಿಕಾರಿ ಕೆ.ಸಿ. ಶಿವಮೂರ್ತಿ ಭಾಷಣ ಪ್ರತಿ ಬಿಡುಗಡೆ ಮಾಡಿದರು. 3ನೇ ತಾಲೂಕು ಕನ್ನಡ ಸಾಹಿತ್ಯ ಸಮ್ಮೇಳನಾಧ್ಯಕ್ಷ ಎಂ.ಓ. ಮಮತೇಶ ಪ್ರಸ್ತುತ ಸಮ್ಮೇಳನಾಧ್ಯಕ್ಷರಿಗೆ ಅಧಿಕಾರ ಹಸ್ತಾಂತರಿಸಿದರು.

ಕೆ.ಆರ್. ಕಾತ್ಯಾಯಿನಿ ಪ್ರಾರ್ಥಿಸಿದರು. ಜ್ಯೋತಿ ತಂಡದವರು ನಾಡಗೀತೆ ಹಾಡಿದರು. ಮಂಜುಳಾ ಹರಿನಹಳ್ಳಿ ಕಾರ್ಯಕ್ರಮ ನಿರೂಪಿಸಿದರು.

'ದ್ವೇಷಕ್ಕಲ್ಲ, ಪ್ರೀತಿಗೆ ಮತ ನೀಡಿ..'; ಮಲ್ಲಿಕಾರ್ಜುನ ಖರ್ಗೆ

■ ವಿಜಯಸಾಕ್ಷಿ ಸುದ್ದಿ, ನವದೆಹಲಿ

ಲೋಕಸಭೆ ಚುನಾವಣೆಯ ಐದನೇ ಹಂತದಲ್ಲಿ 49 ಕ್ಷೇತ್ರಗಳಲ್ಲಿ ಮತದಾನ ಆರಂಭಗೊಂಡಿದ್ದು, ಕಾಂಗ್ರೆಸ್ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಸೋಮವಾರ ಮನವಿ ಮಾಡಿದ್ದು, "ಜನರು ಪ್ರೀತಿಗಾಗಿ ಮತ ಚಲಾಯಿಸಬೇಕು ಮತ್ತು ದ್ವೇಷಕ್ಕಾಗಿ ಮತ ಚಲಾಯಿಸಬಾರದು, ನಿರುದ್ಯೋಗ ಮತ್ತು ಹಣದುಬ್ಬರದ ವಿರುದ್ಧ ಮತ ಚಲಾಯಿಸಬೇಕು" ಎಂದು ಹೇಳಿದ್ದಾರೆ.

ಐದನೇ ಹಂತದಲ್ಲಿ ಆರು ರಾಜ್ಯಗಳು ಮತ್ತು ಎರಡು ಕೇಂದ್ರಾಡಳಿತ ಪ್ರದೇಶಗಳ 49 ಕ್ಷೇತ್ರಗಳಲ್ಲಿ ಮತದಾನ ನಡೆಯುತ್ತಿದ್ದು, ಕಾಂಗ್ರೆಸ್‌ನ ಮಾಜಿ ಅಧ್ಯಕ್ಷ ರಾಹುಲ್ ಗಾಂಧಿ, ಕೇಂದ್ರ ಸಚಿವರಾದ ರಾಜನಾಥ್ ಸಿಂಗ್ ಮತ್ತು ಸ್ಮೃತಿ ಇರಾನಿ, ಜಮ್ಮು ಮತ್ತು ಕಾಶ್ಮೀರದ ಮಾಜಿ

ಮುಖ್ಯಮಂತ್ರಿಗಳಾದ ಒಮರ್ ಅಬ್ದುಲ್ಲಾ ಸೇರಿದಂತೆ ಹಲವಾರು ಪ್ರಮುಖ ನಾಯಕರ ಚುನಾವಣಾ ಭವಿಷ್ಯವನ್ನು ನಿರ್ಧರಿಸಲಿದೆ.

ತಮ್ಮ ಹೇಳಿಕೆ ಬಿಡಗಡೆ ಮಾಡಿರುವ ಖರ್ಗೆ, "ನಾವು ಪ್ರಜಾಪ್ರಭುತ್ವ ಮತ್ತು ಸಂವಿಧಾನವನ್ನು ರಕ್ಷಿಸಬೇಕಾದರೆ, ಇವಿಎಂ ಬಟನ್ ಒತ್ತುವ ಮೊದಲು ಮತದಾನ ಮಾಡಬೇಕು. ನಾವು ದ್ವೇಷಕ್ಕಾಗಿ ಅಲ್ಲ, ಪ್ರೀತಿ ಮತ್ತು ಸಹೋದರತ್ವಕ್ಕಾಗಿ ಮತ ಚಲಾಯಿಸಬೇಕು ಎಂಬುದನ್ನು ನೆನಪಿಡಿ; ನಾವು ನಿರುದ್ಯೋಗ ಮತ್ತು ಹಣದುಬ್ಬರದ ವಿರುದ್ಧ ಮತ ಚಲಾಯಿಸಬೇಕು, ಕೆಲವು ಬಂಡವಾಳಶಾಹಿಗಳನ್ನು ಶ್ರೀಮಂತರನ್ನಾಗಿ ಮಾಡಲು ಅಲ್ಲ. ನಾವು ನಮ್ಮ ಮೂಲಭೂತ ಹಕ್ಕುಗಳ ರಕ್ಷಣೆಗಾಗಿ ಮತ ಹಾಕಬೇಕು, ನಮ್ಮ ಹಕ್ಕುಗಳನ್ನು ಕಸಿದುಕೊಳ್ಳುವವರಿಗೆ ಅಲ್ಲ" ಎಂದು ಕಾಂಗ್ರೆಸ್ ಅಧ್ಯಕ್ಷರು ಹೇಳಿದ್ದಾರೆ.

ಅನ್ಯಾಯ, ದಬ್ಬಾಳಿಕೆಗಾಗಿ ಅಲ್ಲ, ನ್ಯಾಯಕ್ಕಾಗಿ ಮತ ಹಾಕಬೇಕು ಎಂದು ಮನವಿ ಮಾಡಿದರು.

"ಪ್ರಜಾಪ್ರಭುತ್ವಕ್ಕಾಗಿ ಮತ ಚಲಾಯಿಸಿ, ಸರ್ವಾಧಿಕಾರಕ್ಕಾಗಿ ಅಲ್ಲ. ಎಂಟು ರಾಜ್ಯಗಳು ಮತ್ತು ಕೇಂದ್ರಾಡಳಿತ ಪ್ರದೇಶಗಳ ಮತದಾರರು ಇಂದು 49 ಲೋಕಸಭಾ ಸ್ಥಾನಗಳಲ್ಲಿ ಮತದಾನದ ಹಕ್ಕನ್ನು ಚಲಾಯಿಸುತ್ತಾರೆ, ಯುವ ನ್ಯಾಯ್, ನಾರಿ ನ್ಯಾಯ್, ಕಿಸಾನ್ ನ್ಯಾಯ್, ಶ್ರಮಿಕ್ ನ್ಯಾಯ್ ಮತ್ತು ಹಿಸ್ಸೆದಾರಿ ಕಾರ್ಯಸೂಚಿಯಲ್ಲಿ ಮತ ಚಲಾಯಿಸುತ್ತಾರೆ" ಎಂದು ವಿಶ್ವಾಸ ವ್ಯಕ್ತಪಡಿಸಿದ್ದಾರೆ.

ನಿಮ್ಮ ಕೈ ಇವಿಎಂ ಗುಂಡಿಯನ್ನು ಒತ್ತಿದಾಗ, ಈಗಾಗಲೇ ಅಸ್ಥಿರವಾಗಿರುವ ಸರ್ವಾಧಿಕಾರದ ಕುರ್ಚಿಗೆ ಮತ್ತೊಂದು ಹಿನ್ನಡೆಯಾಗಲಿದೆ ಮತ್ತು ಪ್ರಜಾಪ್ರಭುತ್ವವು ಬಲಗೊಳ್ಳುತ್ತದೆ ಎಂದು ಖರ್ಗೆ ಹೇಳಿದರು.

ಮೊದಲ ಬಾರಿಗೆ ಮತದಾನ ಮಾಡಿದವರನ್ನು ಸ್ವಾಗತಿಸಿದ ಅವರು, ಅವರದು ಐತಿಹಾಸಿಕ ಜವಾಬ್ದಾರಿ ಎಂದು ಪ್ರತಿಪಾದಿಸಿದರು.

"ನಾಲ್ಕು ಹಂತಗಳ ಟ್ರೆಂಡ್‌ಗಳು 'ಹುಕ್ಮಶಾ' ನಿರ್ಗಮನ ಖಚಿತ ಎಂದು ತೋರಿಸುತ್ತವೆ. ಇಂದು ವಿದಾಯಕ್ಕೆ ಐದನೇ ಹೆಜ್ಜೆಯಾಗಿದೆ. ಜೂನ್ 4 ರಿಂದ ಹೊಸ ಆರಂಭವನ್ನು ಮಾಡಲಾಗುವುದು" ಎಂದರು.

ಕೇಂದ್ರ ಪಡೆ ಜವಾನನಿಂದ ಮಹಿಳೆಯ ಮೇಲೆ ದೌರ್ಜನ್ಯ

■ ವಿಜಯಸಾಕ್ಷಿ ಸುದ್ದಿ, ಪಶ್ಚಿಮ ಬಂಗಾಳ

ಐದನೇ ಹಂತದ ಮತದಾನದ ಚುನಾವಣೆಗೆ ಒಂದು ದಿನ ಮೊದಲು ಪಶ್ಚಿಮ ಬಂಗಾಳದ ಉಲುಬೇರಿಯಾ ಲೋಕಸಭಾ ಕ್ಷೇತ್ರದ ಪ್ರದೇಶದಲ್ಲಿ ಕೇಂದ್ರ ಅರೆಸೇನಾ ಪಡೆಯ ಸಿಬ್ಬಂದಿಯೊಬ್ಬರು ಮಹಿಳೆಗೆ ಕಿರುಕುಳ ನೀಡಿದ್ದಾನೆ ಎಂದು ತೃಣಮೂಲ ಕಾಂಗ್ರೆಸ್ (ಟಿಎಂಸಿ) ಆರೋಪಿಸಿದೆ.

ಈ ಬಗ್ಗೆ ಕ್ರಮ ಕೈಗೊಳ್ಳುವಂತೆ ಪಕ್ಷವು ಉಲುಬೇರಿಯಾ ಲೋಕಸಭಾ ಕ್ಷೇತ್ರದ ಪೊಲೀಸ್ ವೀಕ್ಷಕರಿಗೆ ಪತ್ರ ಬರೆದಿದೆ.

ದೂರಿನ ನಂತರ, ಉಲುಬೇರಿಯಾ ಪೊಲೀಸ್ ಠಾಣೆಯಲ್ಲಿ ಭಾರತೀಯ ದಂಡ ಸಂಹಿತೆಯ (ಐಪಿಸಿ) ಬಹು ಸೆಕ್ಷನ್‌ಗಳ ಅಡಿಯಲ್ಲಿ ಆರೋಪಿ ಬಿಎಸ್‌ಎಫ್ ಕಾನ್‌ಸ್ಟೆಬಲ್ ವಿರುದ್ಧ ಪ್ರಥಮ ಮಾಹಿತಿ ವರದಿ (ಎಫ್‌ಐಆರ್) ದಾಖಲಿಸಲಾಗಿದೆ.

"ಈ ಘಟನೆಯ ವರದಿಗಳು ಜಿಲ್ಲೆಯಾದ್ಯಂತ ವೇಗವಾಗಿ ಹರಡಿತು, ನಿವಾಸಿಗಳಲ್ಲಿ ಭಯವನ್ನು ಉಂಟುಮಾಡುತ್ತದೆ, ವಿಶೇಷವಾಗಿ ಚುನಾವಣಾ ಅವಧಿಯಲ್ಲಿ ಕೇಂದ್ರೀಯ ಪಡೆಗಳಿಂದ ಮಹಿಳೆಯರ ಸುರಕ್ಷತೆಯ ಬಗ್ಗೆ. ಈ ಘಟನೆಯ ಬಗ್ಗೆ ಕೂಲಂಕಷವಾಗಿ ತನಿಖೆ ನಡೆಸಿ ಅಗತ್ಯ ಕ್ರಮ ಕೈಗೊಳ್

ಬೀದಿ ಬದಿ ವ್ಯಾಪಾರಿಗಳಿಂದ ಜಿಲ್ಲಾಧಿಕಾರಿ ಕಛೇರಿಯೆದುರು ಪ್ರತಿಭಟನೆ

ನ್ಯಾಯ ಒದಗಿಸದಿದ್ದರೆ ಪ್ರತಿಭಟನೆ ನಿರಂತರ

■ ವಿಜಯಸಾಕ್ಷಿ ಸುದ್ದಿ, ಗದಗ

ಜಿಲ್ಲಾಡಳಿತದ ನಿರ್ಲಕ್ಷ್ಯದಿಂದ ಬೀದಿ ವ್ಯಾಪಾರಿಗಳು ಸಂಕಷ್ಟದ ಸ್ಥಿತಿಯಲ್ಲಿದ್ದು, ಇದರಿಂದ ಬೇಸತ್ತು ಶಿರಹಟ್ಟಿ, ಮುಂಡರಗಿ, ಲಕ್ಕೇಶ್ವರ, ರೋಣ, ನರಗುಂದ, ಗದಗ ಸೇರಿದಂತೆ ಜಿಲ್ಲೆಯಾದ್ಯಂತ ಇರುವ ಬೀದಿ ವ್ಯಾಪಾರಿಗಳಿಂದ ನಗರದ ಜಿಲ್ಲಾಡಳಿತದ ಮುಂದೆ ಬೃಹತ್ ಪ್ರತಿಭಟನೆಯನ್ನು ಹಮ್ಮಿಕೊಂಡರು. ಇದೇ ವೇಳೆ ಸ್ಥಳದಲ್ಲೇ ಅಡುಗೆ ಮಾಡಿ ವಿನೂತನವಾಗಿ ಹೋರಾಟ ಕೈಗೊಂಡರು.

ಪ್ರತಿಭಟನೆಯ ನೇತೃತ್ವ ವಹಿಸಿದ್ದ ಬೀದಿಬದಿ ವ್ಯಾಪಾರಿಗಳ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಹಾಗೂ ರಾಜ್ಯ ಉಪಾಧ್ಯಕ್ಷ ಭಾಷಾಸಾಬ ಮಲ್ಲಸಮುದ್ರ ಮಾತನಾಡಿ, ನಮಗೆ ನ್ಯಾಯ ಸಿಗುವವರೆಗೂ ಪ್ರತಿಭಟನೆ ಕೈಬಿಡುವುದಿಲ್ಲ. ಬೀದಿ ವ್ಯಾಪಾರಿಗಳಿಗೆ ನ್ಯಾಯ ಒದಗಿಸದಿದ್ದರೆ ನಿರಂತರ ಪ್ರತಿಭಟನೆಯಿಂದ ಹಿಂದೆ ಸರಿಯುವುದಿಲ್ಲ ಎಂದು ಜಿಲ್ಲಾಡಳಿತಕ್ಕೆ ಹಾಗೂ ಕೌಶಲ್ಯಾಭಿವೃದ್ಧಿ ಇಲಾಖೆಯ ಅಧಿಕಾರಿಗಳಿಗೆ ಎಚ್ಚರಿಕೆ ನೀಡಿದರು.

ಕರ್ನಾಟಕ ರಾಜ್ಯ ಬೀದಿ ವ್ಯಾಪಾರಿಗಳ ಜೀವನೋಪಾಯ ಅಧಿನಿಯಮ ಹಾಗೂ ಬೀದಿ ವ್ಯಾಪಾರಿಗಳ ನಿಯಂತ್ರಣ ಮತ್ತು ಸಂರಕ್ಷಣಾ ಕಾಯ್ದೆ-2014ರ ಪ್ರಕಾರ ಕರ್ನಾಟಕ ರಾಜ್ಯ

2019ರಲ್ಲಿ ಅಧಿಸೂಚನೆ ಹೊರಡಿಸಲಾಯಿತು. ನಂತರ ಆಯಾ ಸ್ಥಳಿಯ ಸಂಸ್ಥೆಗಳಲ್ಲಿ ಬೀದಿ ವ್ಯಾಪಾರಿಗಳಿಂದ ಚುನಾಯಿತ ಪ್ರತಿನಿಧಿ ಆಯ್ಕೆ ಮಾಡುವುದರ ಮೂಲಕ ಪಟ್ಟಣ ಮಾರಾಟ ಸಮಿತಿ ರಚಿಸಲಾಯಿತು. ಪಟ್ಟಣ ಮಾರಾಟ ಸಮಿತಿಯು ನಗರ ವಸತಿ ಮಂತ್ರಾಲಯ ಸಚಿವರಿಂದ ಬೀದಿ ವ್ಯಾಪಾರಿಗಳ ಕುಂದು-ಕೊರತೆಗಳು ಹಾಗೂ ಅಭಿವೃದ್ಧಿಯ ವಿಚಾರವಾಗಿ ಪಟ್ಟಣ ಮಾರಾಟ ಸಮಿತಿಯ ತಿರ್ಮಾನವೇ ಅಂತಿಮ ಎಂಬುದನ್ನು ರಾಜ್ಯದ ಎಲ್ಲ ಕೌಶಲ್ಯಾಭಿವೃದ್ಧಿ ಇಲಾಖೆಯ ನಿರ್ದೇಶಕರಿಗೆ ಆದೇಶ ಹೊರಡಿಸಿತು ಎಂದರು.

ಗದಗ ಜಿಲ್ಲೆಗೆ ಸರಿ-ಸುಮಾರು 3 ಕೋಟಿ 95ಲಕ್ಷ ಅನುದಾನ ನೀಡಲಾಗಿದೆ. ಜಿಲ್ಲೆಯ 9 ಸ್ಥಳೀಯ ಸಂಸ್ಥೆಗಳ ಮುಖ್ಯಾಧಿಕಾರಿಗಳು ಹಾಗೂ ಸಮುದಾಯ ಸಂಘಟನಾ ಅಧಿಕಾರಿಗಳ ಟಿ.ವಿ.ಸಿ ಸಭೆಯ ಗಮನಕ್ಕೆ ತರದೇ, ತಮಗೆ ಬೇಕಾದಷ್ಟು ಹಣ ಬಳಕೆ ಮಾಡಿಕೊಂಡು ಇನ್ನುಳಿದ 2.50 ಕೋಟಿ ರೂ. ಹಣವನ್ನು ಹಿಂತಿರುಗಿಸಿದ್ದಾರೆ. ಬೀದಿ ವ್ಯಾಪಾರಿಗಳಿಂದ ಪ್ರತಿನಿತ್ಯ ಶುಲ್ಕ ಸಂಗ್ರಹ ಮಾಡಿ ಪಟ್ಟಣ ಮಾರಾಟ ಸಮಿತಿಗೆ ಜಮೆ ಮಾಡಲು ರಾಜ್ಯ ಅಭಿಯಾನ ನಿರ್ದೇಶಕರು ನಿರ್ದೇಶನ ನೀಡಿದರು. ಯೋಜನಾ ನಿರ್ದೇಶಕರು ಹಾಗೂ

ಹೆಚ್.ಕೆ. ಪಾಟೀಲರಿಗೆ ಮನವಿ

ಜಿಲ್ಲಾ ಉಸ್ತುವಾರಿ ಸಚಿವ ಎಚ್. ಕೆ. ಪಾಟೀಲರು ಜಿಲ್ಲಾಧಿಕಾರಿ ಕಚೇರಿಗೆ ಸಭೆ ನಡೆಸಲು ತೆರಳುತ್ತಿದ್ದ ಸಂದರ್ಭದಲ್ಲಿ, ಪ್ರತಿಭಟನಾಕಾರರ ಬಳಿ ಬಂದು ಅವರ ಸಮಸ್ಯೆಗಳನ್ನು ಆಲಿಸಿ ಮನವಿ ಪತ್ರವನ್ನು ಸ್ವೀಕರಿಸಿದರಲ್ಲದೆ, ಶೀಘ್ರದಲ್ಲೇ ಜಿಲ್ಲಾಧಿಕಾರಿಗಳು ಹಾಗೂ ಕೌಶಲ್ಯಾಭಿವೃದ್ಧಿ ಅಧಿಕಾರಿಗಳ ಜೊತೆ ಮಾತನಾಡುವುದಾಗಿ ಭರವಸೆ ನೀಡಿದರು.

ಜಿಲ್ಲಾ ಕೌಶಲ್ಯಾಭಿವೃದ್ಧಿ ಅಧಿಕಾರಿಗಳು ಬೀದಿ ವ್ಯಾಪಾರಿಗಳ ಸಭೆ ಮಾಡಿರುವಂತೆ ನಾಟಕವಾಡಿ ಶುಲ್ಕ ಸಂಗ್ರಹ ಮಾಡುತ್ತಿದ್ದಾರೆ. ಇದರಿಂದ ಬೀದಿ ವ್ಯಾಪಾರಿಗಳಿಗೆ ತೊಂದರೆ ಆಗುತ್ತಿದೆ ಎಂದು ಜಿಲ್ಲಾಡಳಿತದ ವಿರುದ್ಧ ಆಕ್ರೋಶ ವ್ಯಕ್ತಪಡಿಸಿದರು.

ಈ ಸಂದರ್ಭದಲ್ಲಿ ಬೀದಿ ವ್ಯಾಪಾರಿಗಳ ಜಿಲ್ಲಾಧ್ಯಕ್ಷ ಮಾರುತಿ ಸೊಳಂಕಿ, ಶಹರ ಘಟಕದ ಅಧ್ಯಕ್ಷ ಮುಕ್ತುಂಸಾಬ್ ನರಗುಂದ, ಜಹಾಂಗಿರ ಮುಳಗುಂದ, ರಾಜು ರೋಣದ, ರೇಣುಕಾ ಹತ್ತಿವಾಲೆ, ರಶೀದಾ ನದಾಫ್, ದಾದು ಮುಂಡರಗಿ ಮುಂತಾದವರು ಉಪಸ್ಥಿತರಿದ್ದರು.

ಆಳ್ವಾಸ್ ಶಾಲೆಗೆ ಆಯ್ಕೆ

■ ವಿಜಯಸಾಕ್ಷಿ ಸುದ್ದಿ, ಮುಳಗುಂದ

ಪಟ್ಟಣದ ಸರಕಾರಿ ಹಿರಿಯ ಪ್ರಾಥಮಿಕ ಶಾಲೆ (ಡಿಪಿಇಪಿ) ಶಾಲೆಯ 5ನೇ ತರಗತಿ ವಿದ್ಯಾರ್ಥಿನಿ ರಶೀದಾ ಮುಂದಿನಮನಿ ಹಾಗೂ ಬಾಲಲೀಲಾ ಮಾಹಾಂತ ಶಿವಯೋಗಿ ಶಿಕ್ಷಣ ಸಮಿತಿಯ 9ನೇ ತರಗತಿಯ ವಿದ್ಯಾರ್ಥಿ ಕಾರ್ತಿಕ ಹೊಂಬಳ ಯೋಗ ಕೋಟಾದಡಿ ಮೂಡಬಿದರಿಯ ಪ್ರತಿಷ್ಠಿತ ಆಳ್ವಾಸ್ ಶಾಲೆಗೆ ಉಚಿತ ಶಿಕ್ಷಣಕ್ಕೆ ಆಯ್ಕೆಯಾಗಿದ್ದು, ಯೋಗ ಶಿಕ್ಷಕ ಪ್ರಕಾಶ ಮದ್ದಿನ ಅಭಿನಂದನೆ ಸಲ್ಲಿಸಿದ್ದಾರೆ.

ಜ. ರೇಣುಕಾಚಾರ್ಯ ಜಯಂತಿ ಯುಗಮಾನೋತ್ಸವದಲ್ಲಿ ಶ್ರೀ ರಂಭಾಪುರಿ ಜಗದ್ಗುರುಗಳು

ಗುರು ಕಾರುಣ್ಯದಿಂದ ಬದುಕು ಉಜ್ವಲ

■ ವಿಜಯಸಾಕ್ಷಿ ಸುದ್ದಿ, ಅಜ್ಜಂಪುರ

ತಾಯಿ-ತಂದೆ ಮತ್ತು ಶ್ರೀ ಗುರು ಜೀವನ ವಿಕಾಸದ ಬಹು ದೊಡ್ಡ ಶಕ್ತಿ. ಭೌತಿಕ ಬದುಕಿಗೆ ತಾಯ್ತಂದೆ ಕಾರಣರಾದರೆ ಆಧ್ಯಾತ್ಮ ಬದುಕಿಗೆ ಗುರು ಮೂಲ. ಗುರು ಕಾರುಣ್ಯದಿಂದ ಮನುಷ್ಯನ ಬದುಕು ಉಜ್ವಲಗೊಳ್ಳುವುದೆಂದು ಬಾಳೆಹೊನ್ನೂರು ಶ್ರೀ ರಂಭಾಪುರಿ ಡಾ.ವೀರಸೋಮೇಶ್ವರ ಜಗದ್ಗುರುಗಳು ಅಭಿಪ್ರಾಯಪಟ್ಟರು.

ಅವರು ಭಾನುವಾರ ಸಂಜೆ ತಾಲೂಕಿನ ಗೊಂಡೇದಹಳ್ಳಿ ಸಾಮೂಹಿಕ ಸಭಾ ಭವನದಲ್ಲಿ ಜರುಗಿದ ಶ್ರೀ ಜಗದ್ಗುರು ರೇಣುಕಾಚಾರ್ಯ ಜಯಂತಿ ಯುಗಮಾನೋತ್ಸವದ 18ನೇ ವರ್ಷದ ಧರ್ಮ ಸಮಾರಂಭದ ಸಾನ್ನಿಧ್ಯ ವಹಿಸಿ ಆಶೀರ್ವಚನ ನೀಡುತ್ತಿದ್ದರು.

ಭಗವಂತನ ಶಕ್ತಿ ಅದ್ಭುತ. ಆದರೆ ಕಣ್ಣಿಗೆ ಕಾಣುವುದಿಲ್ಲ. ಪರಶಿವನ ಸಾಕಾರ ರೂಪ ಶ್ರೀ ಗುರು. ಶಿವ ಮತ್ತು ಗುರುವಿನಲ್ಲಿ ಯಾವುದೇ ಭೇದವಿಲ್ಲ. ವೀರಶೈವ ಧರ್ಮದಲ್ಲಿ ಗುರುವಿಗೆ ಅಗ್ರಸ್ಥಾನವಿದೆ. ಸಮರ್ಥ ಗುರುವಿನಿಂದ ಏನೆಲ್ಲ ಸೌಭಾಗ್ಯ ಸಂಪತ್ತು ಪ್ರಾಪ್ತಿಯಾಗುತ್ತದೆ. ಅಷ್ಟಾವರಣದಲ್ಲಿ ಗುರು ಮೊದಲಿಗನಾಗಿದ್ದು, ಭವ ಬಂಧನದಿಂದ ಭಕ್ತನನ್ನು ಮುಕ್ತಗೊಳಿಸುವ ಶಕ್ತಿಯಿದೆ. ಜಗದ ಕತ್ತಲೆ ಕಳೆಯಲು ಸೂರ್ಯ ಬೇಕು. ಬದುಕಿನ ಅಜ್ಞಾನ ಕಳೆಯಲು ಗುರು ಬೇಕು. ಶ್ರೀ ಜಗದ್ಗುರು ರೇಣುಕಾಚಾರ್ಯರು ಬೋಧಿಸಿದ ಶಿವಾದ್ವೈತ ಸಿದ್ಧಾಂತದಲ್ಲಿ ಶ್ರೀ ಗುರುವಿನ ಪಾತ್ರ ಅಮೋಘವಾಗಿದೆ ಎಂದರು.

ಅಧ್ಯಕ್ಷತೆ ವಹಿಸಿದ ಎಡೆಯೂರು ಕ್ಷೇತ್ರದ ರೇಣುಕ ಶಿವಾಚಾರ್ಯ ಸ್ವಾಮಿಗಳು ಮಾತನಾಡಿ, ವಿಶ್ವ ಬಂಧುತ್ವ ಸಾರಿದ ಶ್ರೀ ಜಗದ್ಗುರು ರೇಣುಕಾಚಾರ್ಯರ ಚಿಂತನಗಳು ಜನಮನವನ್ನು ತಲುಪಬೇಕೆಂಬ ಸದುದ್ದೇಶದಿಂದ ಪ್ರತಿ ವರ್ಷ ಈ ಸಮಾರಂಭ ಜರುಗುತ್ತಿದೆ. ಜಾತಿ-ಮತ ಜಂಜಡಗಳನ್ನು ಮೀರಿ ಧಾರ್ಮಿಕ ಮತ್ತು ಸಾಮಾಜಿಕ ಸತ್ಕ್ರಾಂತಿಗೈದ ಮೊದಲ ಶ್ರೇಯಸ್ಸು ಶ್ರೀ ರೇಣುಕಾಚಾರ್ಯರಿಗೆ ಸಲ್ಲುತ್ತದೆ ಎಂದರು.

ತಾವರೆಕೆರೆ ಶಿಲಾ ಮಠದ ಡಾ.ಅಭಿನವ ಸಿದ್ಧಲಿಂಗ ಶಿವಾಚಾರ್ಯರು ಪ್ರಾಸ್ತಾವಿಕವಾಗಿ ಮಾತನಾಡಿದರು. ನಿವೃತ್ತ ಸೇನಾಧಿಕಾರಿ ಬಗ್ಗವಳ್ಳಿ ಸೋಮಶೇಖರ್ ರಾಜು ಸಮಾರಂಭವನ್ನು ಉದ್ಘಾಟಿಸಿದರು. 'ಪುಣ್ಯಕೋಟಿ ಗೋ ಸಂರಕ್ಷಣಾ ಪುರಸ್ಕಾರ'ವನ್ನು ಚನ್ನಾಪುರದ ನಾಗಭೂಷಣ ಅವರಿಗೆ ಪ್ರದಾನ ಮಾಡಲಾಯಿತು.

ಶೈಲಾ-ಜಿ.ಎನ್. ಶಿವಪ್ಪ, ಗಂಗಾಧರಯ್ಯ, ಜಿ.ಹೆಚ್. ಗಿರೀಶ್, ಜಿ.ಎಸ್. ಷಡಾಕ್ಷರಪ್ಪ, ಎ.ಸಿ. ಚಂದ್ರಪ್ಪ, ರತ್ನಕುಮಾರ್, ನವಾಬ್, ಹೆಚ್.ಇ. ಸೋಮಶೇಖರಪ್ಪ, ವೀರಭದ್ರಪ್ಪ, ಪರಮೆಶ್ವರಪ್ಪ, ಹೆಚ್.ಪಿ. ಶಂಕರಯ್ಯ ಸೇರಿದಂತೆ ಹಲವಾರು ಗಣ್ಯರಿಗೆ ಮತ್ತು ದಾನಿಗಳಿಗೆ ಶ್ರೀ ರಂಭಾಪುರಿ ಜಗದ್ಗುರುಗಳು ಗುರುರಕ್ಷೆಯಿತ್ತು ಶುಭ ಹಾರೈಸಿದರು.

ಹುಣಸಘಟ್ಟ ಹಾಲುಸ್ವಾಮಿ ಮಠದ ಗುರುಮೂರ್ತಿ ಶಿವಾಚಾರ್ಯ ಸ್ವಾಮಿಗಳು ಸಮ್ಮುಖ ವಹಿಸಿದ್ದರು. ಶ್ರೀ ಬಸವೇಶ್ವರ ಭಜನಾ ಮಂಡಳಿಯವರು ಪ್ರಾರ್ಥನೆ ಸಲ್ಲಿಸಿದರು. ಜಿ.ಎಂ. ಶಾಂತಕುಮಾರ ಸ್ವಾಗತಿಸಿದರು. ಬಿಳಕಿ ಹಿರೇಮಠದ ರಾಜೋಟೇಶ್ವರ ಶಿವಾಚಾರ್ಯರು ನಿರೂಪಿಸಿದರು.

ದತ್ತಿ ಉಪನ್ಯಾಸ ನೀಡಿದ ಪತ್ರಕರ್ತ ಪ್ರಶಾಂತ ರಿಪ್ಪನ್‌ಪೇಟೆ ಮಾತನಾಡಿ, ದೈಹಿಕ ರೋಗ ನಿರೋಧಕ್ಕೆ ವೈದ್ಯ ಕಾರಣರಾದರೆ, ಭವ ಬಂಧನ ಕಳೆಯಲು ಗುರುವಿನಿಂದ ಮಾತ್ರ ಸಾಧ್ಯ. ಅಂಗ ಅವಗುಣ ನೀಗಿ, ಲಿಂಗ ಗುಣ ಸಂಸ್ಕಾರ ಕೊಡುವ ಮಹಾನ್ ಶಕ್ತಿ ಗುರುವಿಗೆ ಇದೆ. ಶ್ರೀ ಜಗದ್ಗುರು ರೇಣುಕಾಚಾರ್ಯರು ಶಿವಾಂಶ ಸಂಭೂತರು. ಸಕಲ ಜೀವ ಸಂಕುಲಕ್ಕೆ ಸದಾ ಒಳಿತನ್ನು ಬಯಸಿದವರು. ಅವರು ಬೋಧಿಸಿದ ತತ್ವ ಸಿದ್ಧಾಂತಗಳು ಎಂದೆಂದಿಗೂ ದಾರಿದೀಪ ಎಂದರು.

ಎಲ್ಲ ರೈತರಿಗೂ ಬರ ಪರಿಹಾರ ಒದಗಿಸಿ

▶▶ ಮೊದಲನೇ ಪುಟದಿಂದ

ಇದು ಕಾಂಗ್ರೆಸ್ ಸರಕಾರದ ವಿರುದ್ಧ ಪ್ರತಿಭಟನೆ ಅಲ್ಲ. ರಾಜ್ಯ ಸರಕಾರ ರೈತರ ಪರವಾಗಿಯೇ ಇದೆ. ರೈತರಿಗೆ ಬರ ಪರಿಹಾರ ಕೊಡಬೇಕು ಎನ್ನುವ ಕಾರಣಕ್ಕೆ ಸುಪ್ರಿಂಕೋರ್ಟ್ ಮೊರೆ ಹೋಗಿ ಕೇಂದ್ರದಿಂದ ಪರಿಹಾರ ಪಡೆದುಕೊಂಡಿದೆ. ಆ ಹಣ ಎಲ್ಲ ರೈತರಿಗೂ ಸಿಗಬೇಕು ಎನ್ನುವ ಉದ್ದೇಶದೊಂದಿಗೆ ಮನವಿ ಮಾಡಿಕೊಂಡಿದ್ದೇವೆ ಎಂದು ಸ್ಪಷ್ಟಪಡಿಸಿದರು.

ಮನವಿ ಸ್ವೀಕರಿಸಿ ಮಾತನಾಡಿದ ಸಚಿವ ಎಚ್.ಕೆ. ಪಾಟೀಲ, ಜಿಲ್ಲೆಯ ಅರ್ಹ ರೈತರಿಗೆ ಬರ ಪರಿಹಾರ ಸಿಕ್ಕಿಲ್ಲ ಎನ್ನುವುದು ರೈತರ ಅಹವಾಲು. ಸದ್ಯ ಜಿಲ್ಲೆಯ 1.13 ಲಕ್ಷ ರೈತರಿಗೆ ಬರ ಪರಿಹಾರ ಸಿಕ್ಕಿದೆ. 22300 ರೈತರನ್ನು ಅನರ್ಹರು ಎಂದು ಗುರುತಿಸಿದ್ದಾರೆ. ಅ ಪೈಕಿ 9800 ರೈತರು ಜಮೀನು ಪಡಾ ಬಿಟ್ಟಿರುವ ಕಾರಣಕ್ಕೆ ಅಂಥವರನ್ನು ಅನರ್ಹಗೊಳಿಸಿದ್ದಾರೆ. ಈ ಪ್ರಮಾಣದ ರೈತರು ಜಮೀನು ಖಾಲಿ ಬಿಡಲು ಸಾಧ್ಯವಿಲ್ಲ. ಈ ಬಗ್ಗೆ ಮುಖ್ಯಮಂತ್ರಿಗಳ ಗಮನಕ್ಕೂ ತಂದಿದ್ದು, ಅರ್ಹ ರೈತರಿಗೆ ನ್ಯಾಯ ಕೊಡಿಸುವ ಕೆಲಸ ಮಾಡುವೆ ಎಂದು ಭರವಸೆ ನೀಡಿದರು.

ಮಕ್ಕಳಲ್ಲಿ ಸಾಹಿತ್ಯಾಸಕ್ತಿ ಬೆಳೆಯಲಿ

■ ವಿಜಯಸಾಕ್ಷಿ ಸುದ್ದಿ, ಮುಳಗುಂದ

ಮಕ್ಕಳಿಗೆ ಗುಣಮಟ್ಟದ ಶಿಕ್ಷಣ ನೀಡುವ ಜೊತೆಗೆ ಅವರಲ್ಲಿ ಶಿಸ್ತು, ಮೌಲ್ಯಗಳನ್ನು ಬೆಳೆಸಲು ಮತ್ತು ಸಾಹಿತ್ಯಾಸಕ್ತಿ ಬೆಳೆಸುವ ಕೆಲಸವಾಗಬೇಕಿದೆ ಎಂದು ಗದಗ ಗ್ರಾಮೀಣ ಕ್ಷೇತ್ರ ಶಿಕ್ಷಣಾಧಿಕಾರಿ ವಿ.ವಿ. ನಡುವಿನಮನಿ ಅಭಿಪ್ರಾಯಪಟ್ಟರು.

ಅವರು ಇಲ್ಲಿನ ಮಲ್ಲಸಮುದ್ರದ ಸರಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ತಾಲೂಕಾ ಕಸಾಪ ಹಮ್ಮಿಕೊಂಡಿದ್ದ ಬೇಸಿಗೆ ಸಂಭ್ರಮ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿ, ಮಕ್ಕಳಲ್ಲಿ ಕನ್ನಡ ಸಾಹಿತ್ಯ, ಕಥೆ, ಕವನಗಳನ್ನು ರಚನೆ ಮಾಡುವ ಆಸಕ್ತಿಯನ್ನು ಬೆಳೆಸಬೇಕಿದೆ ಎಂದರು.

ವಿ.ಎಂ. ಹಿರೇಮಠ, ಬಿ.ಕೊಣ್ಣೂರ, ಎಸ್.ಆರ್. ಬಂಡಿ, ಡಾ. ರಶ್ಮಿ ಅಂಗಡಿ, ಶಾರದಾ ಕಾರ್ತಕಿ, ಎಸ್.ಜಿ. ಚವಡಿ, ಶ್ರೀಗಿರಿ, ಸಿಆರ್‌ಪಿ ಇಮಾಮಸಾಬ ಗಾಡಗೋಳಿ, ಶಾಲಾ ಪ್ರಧಾನ ಗುರುಗಳು ಹಾಗೂ ಸಿಬ್ಬಂದಿ ವರ್ಗದವರು ಇದ್ದರು.

ಬೀದಿ ಬದಿ ಪಟ್ಟಣ ವ್ಯಾಪಾರಿ ಸಮಿತಿ, ಪುರಸಭೆಯಿಂದ ಜಂಟಿ ಪತ್ರಿಕಾಗೋಷ್ಠಿ

ಬೀದಿ ವ್ಯಾಪಾರಿಗಳ ಹಿತ ಕಾಪಾಡಲು ಕ್ರಮ

■ ವಿಜಯಸಾಕ್ಷಿ ಸುದ್ದಿ, ಗಜೇಂದ್ರಗಡ

ಸರ್ಕಾರದ ಸಾಲ ಸೇರಿ ಸಕಲ ಸೌಲಭ್ಯಗಳನ್ನು ಪಟ್ಟಣದಲ್ಲಿನ ಬೀದಿ ಬದಿ ವ್ಯಾಪಾರಸ್ಥರಿಗೆ ತಲುಪಿಸುವ ಕಾರ್ಯ ಪುರಸಭೆಯಿಂದ ನಡೆಯುತ್ತಿದೆ ಎಂದು ಪುರಸಭೆ ಯೋಜನಾಧಿಕಾರಿ ಬಿ.ಮಲ್ಲಿಕಾರ್ಜುನ ಹೇಳಿದರು.

ಪಟ್ಟಣದ ಪುರಸಭೆ ಸಭಾಭವನದಲ್ಲಿ ಸೋಮವಾರ ಬೀದಿ ಬದಿ ಪಟ್ಟಣ ವ್ಯಾಪಾರಿ ಸಮಿತಿ ಹಾಗೂ ಪುರಸಭೆಯಿಂದ ನಡೆದ ಜಂಟಿ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದರು.

ಬೀದಿ ಬದಿ ವ್ಯಾಪಾರಿಗಳ ಅಭಿವೃದ್ಧಿಗಾಗಿ ಸರ್ಕಾರದಿಂದ ಬಂದಿದ್ದ ಅನುದಾನವನ್ನು ಫಲಾನುಭವಿಗಳಿಗೆ ತಲುಪಿಸುವ ಕಾರ್ಯವನ್ನು ಈಗಾಗಲೇ ಮಾಡಿದ್ದೇವೆ. ಸ್ಥಳೀಯ ಬೀದಿ ಬದಿ ವ್ಯಾಪಾರಿಗಳ ಸರ್ವೇ ಕಾರ್ಯದೊಂದಿಗೆ ಅವರಿಗೆ ಪ್ರಮಾಣಪತ್ರ ಹಾಗೂ ಗುರುತಿನ ಚೀಟಿಯನ್ನು ವಿತರಿಸಲು ಬೇಕಾದ ಕಾರ್ಯಗಳು ಕೊನೆಯ ಹಂತದಲ್ಲಿದ್ದು, ಚುನಾವಣೆ ನೀತಿ ಸಂಹಿತೆ ಹಿನ್ನೆಲೆಯಲ್ಲಿ ವಿಳಂಬವಾಗಿದೆ ಎಂದ ಅವರು, ಪಟ್ಟಣದಲ್ಲಿ ಬೀದಿ ಬದಿ ವ್ಯಾಪಾರಿಗಳ ಹಿತ ಕಾಪಾಡಲು ಹಾಗೂ ಅವರಿಗೆ ಜಾಗೃತಿ ಮೂಡಿಸಲು ಸಭೆಗಳ ಜತೆಗೆ ಜಾಗೃತಿ ಕಾರ್ಯಕ್ರಮಗಳನ್ನು ನಡೆಸುತ್ತಾ ಬರಲಾಗಿದೆ ಎಂದರು.

ಬೀದಿ ಬದಿ ವ್ಯಾಪಾರಿಗಳ ಸಂಘಟನೆಯ ಜಿಲ್ಲಾಧ್ಯಕ್ಷ ಭಾಷೇಸಾಬ ಕರ್ನಾಚಿ ಮಾತನಾಡಿ, ಪಟ್ಟಣದಲ್ಲಿನ ಬೀದಿ ಬದಿ ವ್ಯಾಪಾರಿಗಳಿಗೆ ಸರ್ಕಾರದಿಂದ ಬರುವ ಸಾಲ ಸೇರಿ ಅನೇಕ ಸೌಲಭ್ಯಗಳನ್ನು ಸಕಾಲದಲ್ಲಿ ತಲುಪಿಸುವ ಕಾರ್ಯವನ್ನು ಜಿಲ್ಲಾಧಿಕಾರಿಗಳು, ಪುರಸಭೆ ಮುಖ್ಯಾಧಿಕಾರಿ, ಯೋಜನಾ ಅಧಿಕಾರಿಗಳು ಮಾಡುತ್ತಾ ಬಂದಿದ್ದಾರೆ. ಪರಿಣಾಮ ಗಜೇಂದ್ರಗಡ ಪುರಸಭೆಯು ಜಿಲ್ಲೆಯಲ್ಲಿನ ಎಲ್ಲ ಸ್ಥಳೀಯ ಸಂಸ್ಥೆಗಳಿಗಿಂತ ಹೆಚ್ಚು ಕ್ರಿಯಾಶೀಲವಾಗಿ ಕೆಲಸ ಮಾಡುತ್ತಿದೆ. ಹೀಗಾಗಿ 10ರಿಂದ 50 ಸಾವಿರ ರೂ.ವರೆಗೆ ಸಾಲವನ್ನು ಪಡೆದಿರುವ ಬೀದಿ ಬದಿ ವ್ಯಾಪಾರಿಗಳು ಸಾಲದ ಕಂತುಗಳನ್ನು ಸಹ ತುಂಬುತ್ತಿದ್ದು, ಈಗಾಗಲೇ ಪ್ರತಿಯೊಬ್ಬ ವ್ಯಾಪಾರಿ ರೂ.1 ಲಕ್ಷ ಸಾಲ ಸೌಲಭ್ಯವನ್ನು ಪಡೆದಿದ್ದಾರೆ ಎಂದು ಹೇಳಿದರು.

ಈ ವೇಳೆ ಚಂದ್ರಶೇಖರ ರಾಠೋಡ, ಹುಲ್ಲಪ್ಪ ತಳವಾರ, ಕವಿತಾ ಹೆಬ್ಬಾಳ, ರಾಜೇಸಾಬ ಕಟ್ಟಿಮನಿ, ಚೌಡಮ್ಮ ಹೆಲ್ಲು ಸೇರಿ ಉಮಾ ಚೌವ್ಹಾಣ, ಸುಕನ್ಯಾ ಸೇರಿ ಇತರರು ಇದ್ದರು.

ಅನೇಕ ವ್ಯಾಪಾರಿಗಳಿಗೆ ಆರೋಗ್ಯ ವಿಮೆಯನ್ನು ಮಾಡಿಸಲಾಗಿದೆ. ಸ್ಥಳೀಯ ವ್ಯಾಪಾರಿಗಳಿಂದ ಶುಲ್ಕವನ್ನು ಸಂಗ್ರಹಿಸಲಾಗಿದ್ದು, ಬೀದಿ ಬದಿ ವ್ಯಾಪಾರಿ ಸಮಿತಿಗೆ ಅಂದಾಜು ರೂ.40 ಸಾವಿರ ಸಂಗ್ರಹವಾಗಿದೆ. ಮುಂದಿನ ದಿನಗಳಲ್ಲಿ ಟಿವಿಸಿಯಿಂದ ಕರ ವಸೂಲಿ ನಡೆಸಲು ಅರ್ಜಿ ಸಲ್ಲಿಸಲಾಗುವುದು. ಸರ್ಕಾರದಿಂದ ಬೀದಿ ಬದಿ ವ್ಯಾಪಾರಿಗಳ ಅಭಿವೃದ್ಧಿಗಾಗಿ ಬಂದಿದ್ದ ಅನುದಾನ ಹಾಗೂ ಹಣ ಸರ್ಕಾರಕ್ಕೆ ಹಿಂಬಡ್ತಿಯಾದ ಮಾಹಿತಿಯಿಲ್ಲ ಎಂದು ಭಾಷೇಸಾಬ ಕರ್ನಾಚಿ ತಿಳಿಸಿದರು.

ಹತ್ಯೆ ಆರೋಪಿಗಳಿಗೆ ಕಠಿಣ ಶಿಕ್ಷೆ ವಿಧಿಸಲು ಮನವಿ

■ ವಿಜಯಸಾಕ್ಷಿ ಸುದ್ದಿ, ಮುಂಡರಗಿ

ಕಲಬುರ್ಗಿ ನಗರದಲ್ಲಿ ಅರ್ಜುನ ಮಡಿವಾಳರ ಎಂಬುವರ ಮೇಲೆ ನಡೆದ ಹೀನ ಕೃತ್ಯವನ್ನು ಖಂಡಿಸಿ ಹಾಗೂ ಕೊಪ್ಪಳ ಜಿಲ್ಲೆ ಕಿನ್ನಾಳ ಗ್ರಾಮದಲ್ಲಿ 7 ವರ್ಷದ ಬಾಲಕಿ ಅನುಶ್ರೀ ಮಡಿವಾಳರ ಕೊಲೆಯನ್ನು ಖಂಡಿಸಿ, ಆರೋಪಿಗಳಿಗೆ ಕಠಿಣ ಶಿಕ್ಷೆ ವಿಧಿಸಬೇಕು ಎಂದು ಒತ್ತಾಯಿಸಿ ತಾಲೂಕು ಮಡಿವಾಳ ಮಾಚೀದೇವ ಸಂಘದಿಂದ ಸೋಮವಾರ ಪ್ರತಿಭಟನೆ ನಡೆಸಿ ತಹಸೀಲ್ದಾರ್ ಮೂಲಕ ರಾಜ್ಯಪಾಲರು, ಡಿಜಿ, ಐಜಿ ಹಾಗೂ ಮಾನವ ಹಕ್ಕುಗಳ ಆಯೋಗಕ್ಕೆ ಮನವಿ ಸಲ್ಲಿಸಲಾಯಿತು.



ದ್ಯಾಮಣ್ಣ ಮಡಿವಾಳರ, ಮಂಜುಳಾ ಮಡಿವಾಳರ, ಹನುಮಂತಪ್ಪ ಮಡಿವಾಳರ, ಅಶೋಕ ಮಡಿವಾಳರ, ಮಲ್ಲಿಕಾರ್ಜುನ ಮಡಿವಾಳರ, ನಿಂ

ದಿ. ರಾಜೀವ್ ಗಾಂಧಿ ಪುಣ್ಯತಿಥಿ ಆಚರಣೆ ಇಂದು

■ ವಿಜಯಸಾಕ್ಷಿ ಸುದ್ದಿ, ಗದಗ

ನಗರದ ಗದಗ ಕೋ-ಆಪ್ ಕಾಟನ್ ಸೇಲ್ ಸೊಸೈಟಿಯ ಆವರಣದಲ್ಲಿರುವ ಗದಗ ಜಿಲ್ಲಾ ಕಾಂಗ್ರೆಸ್ ಕಚೇರಿಯಲ್ಲಿ ಮಾಹಿತಿ ತಂತ್ರಜ್ಞಾನದ ರೂವಾರಿ, ಯುವ ನೇತಾರರು ಹಾಗೂ ದಿ. ಪ್ರಧಾನಿ ರಾಜೀವ್ ಗಾಂಧಿ ಅವರ 33ನೇ ಪುಣ್ಯತಿಥಿ ಆಚರಣೆ ಮೇ 21ರಂದು ಬೆಳಿಗ್ಗೆ 9.30ಕ್ಕೆ ಜರುಗಲಿದೆ.

ಕಾನೂನು, ನ್ಯಾಯ, ಸಂಸದೀಯ ವ್ಯವಹಾರಗಳು, ಶಾಸನ ರಚನೆ, ಮಾನವ ಹಕ್ಕುಗಳು ಹಾಗೂ ಪ್ರವಾಸೋದ್ಯಮ, ಗದಗ ಜಿಲ್ಲಾ ಉಸ್ತುವಾರಿ ಸಚಿವ ಎಚ್.ಕೆ. ಪಾಟೀಲ, ಕೆಪಿಸಿಸಿ ಉಪಾಧ್ಯಕ್ಷ ಹಾಗೂ ಮಾಜಿ ಶಾಸಕ ಡಿ.ಆರ್. ಪಾಟೀಲ ಭಾಗವಹಿಸುವರು.

ಈ ಕಾರ್ಯಕ್ರಮಕ್ಕೆ ಕಾಂಗ್ರೆಸ್ ಪಕ್ಷದ ಜಿಲ್ಲಾ ಪದಾಧಿಕಾರಿಗಳು, ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷರು ಹಾಗೂ ಪದಾಧಿಕಾರಿಗಳು, ಜಿಲ್ಲಾ ಪಂಚಾಯತ್, ತಾಲೂಕು ಪಂಚಾಯಿತಿ, ಗ್ರಾಮ ಪಂಚಾಯಿತಿ, ಎಪಿಎಂಸಿ ಪಕ್ಷದ ಅಧ್ಯಕ್ಷರು ಹಾಗೂ ಸದಸ್ಯರು, ನಗರಸಭೆ, ಪಟ್ಟಣ ಪಂಚಾಯಿತಿ, ಪುರಸಭೆ ಅಧ್ಯಕ್ಷರು ಹಾಗೂ ಸದಸ್ಯರು, ಮಹಿಳಾ ಕಾಂಗ್ರೆಸ್, ಯುವ ಕಾಂಗ್ರೆಸ್, ಎಸ್‌ಸಿ/ಎಸ್‌ಟಿ, ಅಲ್ಪಸಂಖ್ಯಾತರ, ವಿದ್ಯಾರ್ಥಿ ಕಾಂಗ್ರೆಸ್, ಕಾಂಗ್ರೆಸ್ ಸೇವಾದಳ, ಹಿಂದುಳಿದ ವರ್ಗ, ಸಾಮಾಜಿಕ ಜಾಲತಾಣ, ರಾಜೀವಗಾಂಧಿ ಪಂಚಾಯತ ಸಂಘಟನೆ, ಮಾಜಿ ಸೈನಿಕರ ವಿಭಾಗ, ಮೀನುಗಾರ ವಿಭಾಗ, ಕಾರ್ಮಿಕರ ವಿಭಾಗ, ಐಎನ್‌ಟಿಯುಸಿ, ಕಾನೂನು ಮತ್ತು ಮಾನವ ಹಕ್ಕು ವಿಭಾಗ, ಕಿಸಾನ್ ಮತ್ತು ಖೆತ್ ಮಜದೂರ ವಿಭಾಗ, ಮಾಜಿ ಸೈನಿಕರ ವಿಭಾಗ, ವೈದ್ಯರ ವಿಭಾಗ, ವೃತ್ತಿಪರ ವಿಭಾಗ, ಪದವಿಧರ ಹಾಗೂ ಶಿಕ್ಷಕರ ವಿಭಾಗ, ನೀತಿ ಮತ್ತು ಸಂಶೋಧನೆ ತರಬೇತಿ ವಿಭಾಗ, ವಿಕಲಚೇತನರ ವಿಭಾಗ, ಲಿಗಲ್ ರೀಪಾರ್ಮ್ಸ್ ವಿಭಾಗ, ಐಟಿ ಮತ್ತು ಡಾಟಾ ವಿಭಾಗ, ಮಾಧ್ಯಮ ಮತ್ತು ಸಂಪರ್ಕ ಇಲಾಖೆ ವಿಭಾಗಗಳ ಅಧ್ಯಕ್ಷರು ಹಾಗೂ ಸದಸ್ಯರು, ಪಕ್ಷದ ಅಭಿಮಾನಿಗಳು ಪಾಲ್ಗೊಳ್ಳಬೇಕು ಎಂದು ಗದಗ-ಬೆಟಗೇರಿ ಶಹರ ಬ್ಲಾಕ್ ಕಾಂಗ್ರೆಸ್ ಸಮಿತಿ ಅಧ್ಯಕ್ಷ ಬಿ.ಬಿ. ಅಸೂಟಿ ಹಾಗೂ ಗದಗ ಜಿಲ್ಲಾ ಯುವ ಕಾಂಗ್ರೆಸ್ ಅಧ್ಯಕ್ಷ ಅಶೋಕ ಮಂದಾಲಿ ವಿನಂತಿಸಿದ್ದಾರೆ.

ವಿಶೇಷ ಸಾಂಸ್ಕೃತಿಕ ಕಾರ್ಯಕ್ರಮ ಮೇ.25ರಿಂದ

■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಪಟ್ಟಣದ ಬಿಸಿಎನ್ ವಿದ್ಯಾ ಸಂಸ್ಥೆಯ ಮಾಂತೇಶ ನಗರದಲ್ಲಿರುವ ಬಿಸಿಎನ್ ಸ್ಪೆಕ್ಟ್ರಮ್ ಆಂಗ್ಲ ಮಾಧ್ಯಮ ಶಾಲೆ 25ನೇ ವರ್ಷದ ಬೆಳ್ಳಿ ಹಬ್ಬದ ಸಂಭ್ರಮೋತ್ಸವ ಅಂಗವಾಗಿ ಮೇ.25ರಿಂದ 3 ದಿನ ಲಕ್ಷ್ಮೇಶ್ವರ ಮಹಾಸಾಂಸ್ಕೃತಿಕ ಮೇಳ, ವಿಶೇಷ ಸಾಂಸ್ಕೃತಿಕ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ ಎಂದು ಬಿಸಿಎನ್ ವಿದ್ಯಾಸಂಸ್ಥೆಯ ಮುಖ್ಯಸ್ಥ ಲೋಹಿತ ನೆಲವಗಿ ತಿಳಿಸಿದ್ದಾರೆ.

ಮೇ 24ರ ಶುಕ್ರವಾರ ಸಂಜೆ 5ರಿಂದ ಶಾಲಾವರಣದಲ್ಲಿ ಪಂಚವಟಿ ಸಸಿ ನೆಡುವ ಮೂಲಕ ಕಾರ್ಯಕ್ರಮಕ್ಕೆ ಚಾಲನೆ ನೀಡಲಾಗುವುದು. ಬಿಸಿಎನ್ ಶಾಲೆಯ ಹಳೆಯ ವಿದ್ಯಾರ್ಥಿಗಳ ಸಮ್ಮಿಲನ, ಗುರುವಂದನಾ ಕಾರ್ಯಕ್ರಮ ವಿದ್ಯಾರ್ಥಿಗಳು ಮತ್ತು ಕುಟುಂಬದವರ ಪಾಲ್ಗೊಳ್ಳುವಿಕೆಯ ಸಾಂಸ್ಕೃತಿಕ-ಸವಿ ನೆನೆಪುಗಳ ಕಲರವ, ಮೇ 25ರ ಸಂಜೆ 5ರಿಂದ ಸಾಂಪ್ರದಾಯಿಕ-ಪಾಶ್ಚಾತ್ಯ ಶೈಲಿಯ ವೇಷ-ಭೂಷಣ ಸ್ಪರ್ಧೆ, ಅಜ್ಜ-ಮೊಮ್ಮಕ್ಕಳ ರಾಕ್-ವಾಕ್, ಪ್ರಾಥಮಿಕ, ಪ್ರೌಢ, ಕಾಲೇಜು ವಿದ್ಯಾರ್ಥಿಗಳಿಗೆ ನೃತ್ಯ, ಹಾಡು, ರಂಗೋಲಿ, ಡ್ರಾಯಿಂಗ್, ಕುಕ್ಕಿಂಗ್, ಮೆಹಂದಿ ಸ್ಪರ್ಧೆ, 10ನೇ ತರಗತಿ ವಿದ್ಯಾರ್ಥಿಗಳಿಗೆ ಚದುರಂಗ, ಕೇರಂ, ಕರಾಟೆ, ಟೇಬಲ್ ಟೆನ್ನಿಸ್, ಕಬಡ್ಡಿ ಪಂದ್ಯಾವಳಿ, 6 ವರ್ಷದೊಳಗಿನ ಮಕ್ಕಳ ಆರೋಗ್ಯಕರ ಮತ್ತು ಸೂಪರ್ ಮಾಮ್ ಸ್ಪರ್ಧೆ ನಡೆಯಲಿದೆ.

ಮೇ 26ರ ಸಂಜೆ 4ರಿಂದ ಹೊರ ಸಭಾಂಗಣ ಉದ್ಘಾಟನೆ, ವಿವಿಧ ಕ್ಷೇತ್ರದಲ್ಲಿನ ಸಾಧಕರಿಗೆ ಸನ್ಮಾನ, ವಿವಿಧ ಸ್ಪರ್ಧೆಗಳಲ್ಲಿನ ವಿಜೇತರಿಗೆ ಬಹುಮಾನ ವಿತರಣೆ, ಸಾವಿರ ಸಸಿಗಳ ವಿತರಣಾ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ. ಕಾರ್ಯಕ್ರಮದಲ್ಲಿ ಗಣ್ಯಮಾನ್ಯರು, ಹಿರಿಯರು, ಶಿಕ್ಷಕರು, ಹಳೆ ವಿದ್ಯಾರ್ಥಿಗಳು ಪಾಲ್ಗೊಳ್ಳುವರು. ಮಾಹಿತಿಗಾಗಿ 7026643003 ಸಂಪರ್ಕಿಸಲು ಕೋರಿದ್ದಾರೆ.

ಶ್ರೀ ಸೋಮೇಶ್ವರ ದೇವರ ಕಡುಬಿನ ಕಾಳಗ

■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಪಟ್ಟಣದ ಶ್ರೀ ಸೋಮೇಶ್ವರ ದೇವಸ್ಥಾನದ ಜಾತ್ರಾ ಮಹೋತ್ಸವದ ಅಂಗವಾಗಿ ಭಾನುವಾರ ಗೋಧೂಳಿ ಸಮಯದಲ್ಲಿ ಅಪಾರ ಭಕ್ತ ಸಮೂಹದ ನಡುವೆ ಶ್ರದ್ಧಾ ಭಕ್ತಿಯಿಂದ ಕಡುಬಿನ ಕಾಳಗ ನೆರವೇರಿತು.

ಕಡುಬಿನ ಕಾಳಗ ಸಂದರ್ಭದಲ್ಲಿ ಸೋಮೇಶ್ವರ ದೇವರ ಉತ್ಸವ ಮೂರ್ತಿಯೊಂದಿಗೆ ಪಲ್ಲಕ್ಕಿಯು ದೇವಸ್ಥಾನದ ಆವರಣದ, ರಥಬೀದಿ ಪ್ರದಕ್ಷಣೆ ಮತ್ತು ಅಲ್ಲಿಂದ ಸೋಮೇಶ್ವರ ಪಾದಗಟ್ಟಿಗೆ ತೆರಳಿ ಅಲ್ಲಿ 5 ಸುತ್ತು ಪ್ರದಕ್ಷಣೆಯೊಂದಿಗೆ ಕಡುಬಿನ ಕಾಳಗ ನೆರವೇರಿಸಲಾಯಿತು. ಈ ವೇಳೆ ಮುಳಗುಂದ ಮನೆತನದವರು ಸಂಪ್ರದಾಯದಂತೆ ಕಡುಬಿನ ಚೂರುಗಳು, ಬೆಂಡು, ಬತ್ತಾಸ, ಬಿಸ್ಕಟ್, ಬೆಲ್ಲ, ಹಣ್ಣು, ಕಲ್ಲುಸಕ್ಕರೆ ಇತ್ಯಾದಿ ಸಿಹಿ ಪದಾರ್ಥಗಳನ್ನು ಸೇರಿದ್ದ ಅಪರ ಭಕ್ತ ಸಮೂಹದತ್ತ ಎಸೆದರು. ಸೇರಿದ್ದ ಭಕ್ತರು ಅವುಗಳನ್ನು ಆಯ್ದು ಭಕ್ತಿಯಿಂದ ಆಯ್ದುಕೊಂಡು ಸ್ವೀಕರಿಸಿ ಈ ಪ್ರಸಾದ ಸೇವನೆಯಿಂದ ನಮ್ಮ ಬದುಕಿನ ಕಷ್ಟ ಕಾರ್ಪಣ್ಯಗಳು, ರೋಗ-ರುಜಿನಗಳು ದೂರಾಗಲಿ ಎಂದು ಪ್ರಾರ್ಥಿಸಿದರು.

ಸೋಮೇಶ್ವರ ಜಾತ್ರಾ ಕಮಿಟಿಯ ಮುಖಂಡರಾದ ಕುಬೇರಪ್ಪ ಮಹಾಂತಶೆಟ್ಟರ, ಚನ್ನಪ್ಪ ಜಗಲಿ, ವಿರೂಪಾಕ್ಷ ಆದಿ, ಬಸವರಾಜ ಮೆಣಸಿನಕಾಯಿ, ಸೋಮಣ್ಣ ಮುಳಗುಂದ, ಅಶೋಕ ಮುಳಗುಂದ, ರಾಮಣ್ಣ ಗೌರಿ, ಶಿವಯೋಗಿ ಅಂಕಲಕೋಟಿ, ಈರಣ್ಣ ಮುಳಗುಂದ, ಸಿದ್ದನಗೌಡ ಬಳ್ಳೊಳ್ಳಿ, ಬಸಣ್ಣ ಬಾಳಿಕಾಯಿ, ಶಂಭು ಬಂಡಿವಾಡ, ಚನ್ನಪ್ಪ ಆದಿ, ಚಂದ್ರು ಹಂಪಣ್ಣವರ, ಪ್ರಕಾಶ ಮುಳಗುಂದ, ದೀಪು ಕೊಂಚಿಗೇರಿಮಠ ಅರ್ಚಕರಾದ ಸೋಮನಾಥ ಪೂಜಾರ, ಚಿಕ್ಕರಸ ಪೂಜಾರ, ದಿಗಂಬರ ಪೂಜಾರ ಸೇವಕರಾದ ಸೋಮಣ್ಣ ತಂಡಿಗೇರಿ ಸೇರಿ ಅಪಾರ ಭಕ್ತರು ಪಾಲ್ಗೊಂಡಿದ್ದರು.

ಗದಗ ಜಿಲ್ಲಾ ಬಿಜೆಪಿ ಮಹಿಳಾ ಮೋರ್ಚಾ ವತಿಯಿಂದ ರಾಜ್ಯ ಸರ್ಕಾರದ ವಿರುದ್ಧ ಪ್ರತಿಭಟನೆ

ಕರ್ನಾಟಕ 'ಅಪರಾಧಗಳ ರಾಜ್ಯ'ವಾಗುತ್ತಿದೆ

■ ವಿಜಯಸಾಕ್ಷಿ ಸುದ್ದಿ, ಗದಗ

ಹುಬ್ಬಳ್ಳಿಯ ಅಂಜಲಿ ಅಂಬಿಗೇರ ಹತ್ಯೆ ಖಂಡಿಸಿ, ಕಾಂಗ್ರೆಸ್ ನೇತೃತ್ವದ ರಾಜ್ಯ ಸರ್ಕಾರದ ಅವಧಿಯಲ್ಲಿ ಕಾನೂನು ಸುವ್ಯವಸ್ಥೆ ಹದಗೆಟ್ಟಿರುವ ಹಿನ್ನೆಲೆಯಲ್ಲಿ ಗದಗ ಜಿಲ್ಲಾಧಿಕಾರಿಗಳ ಕಚೇರಿ ಎದುರು ಬಿಜೆಪಿ ಮಹಿಳಾ ಮೋರ್ಚಾ ಗದಗ ಜಿಲ್ಲಾಧ್ಯಕ್ಷೆ ನಿರ್ಮಲಾ ಕೊಳ್ಳಿ ನೇತೃತ್ವದಲ್ಲಿ ಬೃಹತ್ ಪ್ರತಿಭಟನೆ ನಡೆಸಿ ಜಿಲ್ಲಾಧಿಕಾರಿಗಳ ಮುಖಾಂತರ ರಾಜ್ಯಪಾಲರಿಗೆ ಮನವಿ ಸಲ್ಲಿಸಲಾಯಿತು.

ಬಿಜೆಪಿ ನೇತೃತ್ವದ ಸರ್ಕಾರ ಇದ್ದಾಗ ರಾಜ್ಯವು ಕಾನೂನು ಸುವ್ಯವಸ್ಥೆ ವಿಚಾರದಲ್ಲಿ ಅಪರಾಧಗಳನ್ನು ಕನಿಷ್ಠ ಪ್ರಮಾಣದಲ್ಲಿ ಇಡುವ ನಿಟ್ಟಿನಲ್ಲಿ ಪ್ರಸಿದ್ಧಿ ಹಾಗು ಉತ್ತಮ ಹೆಸರು ಪಡೆದಿತ್ತು. ಆದರೆ ಇಂದಿನ ಕಾಂಗ್ರೆಸ್ ಸರ್ಕಾರದ ನೇತೃತ್ವದಲ್ಲಿ ಕಾನೂನು-ಸುವ್ಯವಸ್ಥೆ ಹದಗೆಟ್ಟಿದೆ. ಇದೀಗ, ಮಹಿಳೆಯರ ಮೇಲಿನ ದೌರ್ಜನ್ಯ, ಕೊಲೆ, ಸುಲಿಗೆಗಳು, ಬಡವರು, ಶೋಷಿತರ ಮೇಲಿನ ದೌರ್ಜನ್ಯ ಹೆಚ್ಚಾಗಿದೆ. ಕರ್ನಾಟಕವು ಈ ಮೂಲಕ 'ಅಪರಾಧಗಳ ರಾಜ್ಯ' ಎಂಬ ಕೆಟ್ಟ ಹೆಸರು ಪಡೆಯುವಂತಾಗಿದೆ ಎಂದು ಪ್ರತಿಭಟನಾಕಾರರು ಆರೋಪಿಸಿದರು.

ಬಿಜೆಪಿ ಜಿಲ್ಲಾಧ್ಯಕ್ಷ ತೋಟಪ್ಪ(ರಾಜು) ಕುರುಡಗಿ ಮಾತನಾಡಿ, ಮುಖ್ಯಮಂತ್ರಿ ಸಿದ್ರಾಮಯ್ಯನವರು, ಗೃಹ ಸಚಿವ ಜಿ. ಪರಮೇಶ್ವರ ಕಾನೂನು-ಸುವ್ಯವಸ್ಥೆ ಕಾಪಾಡುವಲ್ಲಿ ವಿಫಲರಾಗಿ ರಾಜ್ಯದಲ್ಲಿ ಅಪರಾಧಗಳು ಹೆಚ್ಚುವಂತಾಗಿದೆ. ಸರ್ಕಾರ ಇನ್ನಾದರೂ ಎಚ್ಚೆತ್ತು, ರಾಜ್ಯದಲ್ಲಿ ಜನರಿಗೆ ಶಾಂತಿ, ನೆಮ್ಮದಿಯ ಆಡಳಿತ ನೀಡುವ ಕಠಿಣ ಕಾನೂನು ಜಾರಿಗೆ ತರಬೇಕೆಂದರು.

ಪ್ರತಿಭಟನೆಯಲ್ಲಿ ರತ್ನಾ ಕುರಗೋಡ, ರೇವತಿ ಉಪನಾಳ, ಕಸ್ತೂರಿ ಕಮ್ಮಾರ, ಜ್ಯೋತಿ ಹಾನಗಲ್, ಪವಿತ್ರಾ ಕಲ್ಲುಕಟಗರ್, ನಂದಾ ಪಲ್ಲೇದ, ಶಾರದಾ ದಳವಾಯಿ, ಜ್ಯೋತಿ ಪಾಯಪ್ಪಗೌಡ್ರ, ಸುಮಂಗಲಾ ಕಲ್ಲಾಪೂರ, ಪುಷ್ಪಾ ಉಕ್ಕಲಿ, ಲಕ್ಷ್ಮೀ ಕಾಕಿ, ರೇಖಾ ಬಂಗಾರಶೆಟ್ಟರ, ಶಾಂತಾ ತಿಮ್ಮಾಪೂರ, ಚನ್ನಮ್ಮ ಹುಳಕಣ್ಣವರ, ಶೇಖವ್ವ ಮಾಸರಡ್ಡಿ, ಕಮಲಾಕ್ಷಿ ತಕ್ಕಲಕೋಟಿ, ಸುಮಂಗಲಾ ಕೊನೆವಾಲ, ರಾಜೇಶ್ವರಿ ಹಾದಿಮನಿ, ಶಿವಲೀಲಾ ಉಮಚಗಿ, ರಾಧಾ ಬಾರಕೇರ, ವೀಣಾ ಬೂದಿಹಾಳ, ಮಂಜುಳಾ ಹೆಬ್ಬಳಮಠ, ಪ್ರಭಾವತಿ ಬೆಳವಣಿಕಿಮಠ, ಕೌಶಲ್ಯ ಬದಿ, ಆರ್.ಕೆ. ಚವ್ಹಾನ, ಪಕ್ಕಿರೇಶ ರಟ್ಟಿಹಳ್ಳಿ, ಎಂ.ಎಸ್. ಕರೀಗೌಡ್ರ, ಅಶೋಕ ಸಂಕಣ್ಣವರ, ಕೆ.ಪಿ. ಕೋಟಿಗೌಡ್ರ, ಸುರೇಶ ಚಿತ್ತರಗಿ, ಸುಧೀರ ಕಾಟಿಗರ, ವಿಜಯ ಹಿರೇಮಠ, ಗೈಬುಸಾಬ ಕಲೆಬಾಯಿ, ಲಕ್ಷ್ಮಣ ದೊಡ್ಮನಿ, ಮಾಂತೇಶ ನಲವಡಿ, ಶಂಕರ ಕಾಕಿ, ಮಂಜು ಮುಳಗುಂದ, ಸಂತೋಷ ಅಕ್ಕಿ, ರಮೇಶ ಸಜ್ಜಗಾರ್, ದೇವಪ್ಪ ಗೊಟೂರ, ಅಪ್ಪಣ್ಣ ಟೆಂಗಿನಕಾಯಿ, ಸೊಮೆಶ ಉಪನಾಳ, ರಮೇಶ ಹತ್ತಿಕಾಳ, ಮಾಂತೇಶ ಬಾತಾಖಾನಿ, ಗಣೇಶ, ವಿನಾಯಕ ಪರಾಪೂರ, ಅಯ್ಯಪ್ಪ ಅಂಗಡಿ, ರಾಜೇಶ ಕಟ್ಟಿಮನಿ, ವಿಶ್ವನಾಥ ಶಿರಿಗಣ್ಣವರ, ವಿನೋದ ಹಂಸನೂರ ಸೇರಿದಂತೆ ಹಲವಾರು ಪ್ರಮುಖರು, ಕಾರ್ಯಕರ್ತರು ಉಪಸ್ಥಿತರಿದ್ದರು.

> ವಿಧಾನ ಪರಿಷತ್ ಸದಸ್ಯ ಎಸ್.ವಿ. ಸಂಕನೂರ ಮಾತನಾಡಿ, ಕರ್ನಾಟಕದಲ್ಲಿ ಕಾಂಗ್ರೆಸ್ ನೇತೃತ್ವದ ಸರ್ಕಾರ ರಚನೆಯಾದ ನಂತರ ಒಂದು ಕೋಮಿನವರ ಮನವೊಲಿಸಿ ಅಪರಾಧ ಪ್ರಕರಣಗಳು ಹೆಚ್ಚಾಗುವಂತೆ ಅಪರಾಧಿಗಳಿಗೆ ರಕ್ಷಣೆ ಸಿಗುತ್ತಿದೆ. ಮಹಿಳೆಯರ ಮೇಲೆ ಅತ್ಯಾಚಾರ, ಕೊಲೆ, ಸುಲಿಗೆಗಳಂತಹ ಅಪರಾಧ ಪ್ರಕರಣಗಳು ಹೆಚ್ಚಾಗಿ ನಡೆಯುತ್ತಿದ್ದು ಕು.ಅಂಜಲಿ ಅಂಬಿಗೇರ ಹಾಗೂ ನೇಹಾ ಹಿರೇಮಠರ ಹತ್ಯೆಗಳು ನಮ್ಮ ರಾಜ್ಯದಲ್ಲಿ ಕಾನೂನು-ಸುವ್ಯವಸ್ಥೆ ಹದಗೆಟ್ಟಿರುವದನ್ನು ಸಾಬೀತುಪಡಿಸುತ್ತಿವೆ ಎಂದರು.

ಹತ್ಯೆ ಆರೋಪಿಯನ್ನು ಗಲ್ಲಿಗೇರಿಸಲು ಮನವಿ

■ ವಿಜಯಸಾಕ್ಷಿ ಸುದ್ದಿ, ಗದಗ

ಸೋಶಿಯಲ್ ಡೆಮಾಕ್ರೆಟಿಕ್ ಪಾರ್ಟಿ ಆಫ್ ಇಂಡಿಯಾ ಗದಗ ಜಿಲ್ಲಾ ಸಮಿತಿ ವತಿಯಿಂದ ಹುಬ್ಬಳ್ಳಿಯಲ್ಲಿ ಅಂಜಲಿ ಅಂಬಿಗೇರರನ್ನು ಹತ್ಯೆ ಮಾಡಿದ ಗಿರೀಶನನ್ನು ಗಲ್ಲಿಗೇರಿಸಲು ಒತ್ತಾಯಿಸಿ, ಪ್ರತಿಭಟನೆ ನಡೆಸಿ, ಜಿಲ್ಲಾಧಿಕಾರಿಗಳ ಮೂಲಕ ಸರ್ಕಾರಕ್ಕೆ ಮನವಿ ಸಲ್ಲಿಸಲಾಯಿತು.

ಈ ಸಂದರ್ಭದಲ್ಲಿ ಮಾತನಾಡಿದ ಪಕ್ಷದ ಜಿಲ್ಲಾಧ್ಯಕ್ಷ ಬಿಲಾಲ್ ಗೋಕಾವಿ, ರಾಜ್ಯದಲ್ಲಿ ಹಲವು ಪ್ರೇಮ ವೈಫಲ್ಯದಿಂದ ನಡೆದ ಹತ್ಯೆಗಳ ಬಗ್ಗೆ ವಿಷಾದ ವ್ಯಕ್ತಪಡಿಸಿ, ಪ್ರವೀಣ್ ಚೌಗಲೆ, ಫಯಾಜ್, ಗಿರೀಶ್ ಅವರಂತಹ ವಿಕೃತ ಮನಸ್ಥಿತಿಯ ಅಪರಾದಿಗಳನ್ನು

ತ್ವರಿತವಾಗಿ ಫಾಸ್ಟ್ಟ್ರಾಕ್ ಕಾನೂನು ತರುವ ಮೂಲಕ ಗಲ್ಲು ಶಿಕ್ಷೆಗೆ ಒಳಪಡಿಸಿ ಹೆಣ್ಣು ಮಕ್ಕಳಿಗೆ ನ್ಯಾಯ ಒದಗಿಸಿಕೊಡಬೇಕು ಎಂದು ಸರ್ಕಾರಕ್ಕೆ ಒತ್ತಾಯಿಸಿದರು.

ಪಕ್ಷದ ಪ್ರಧಾನ ಕಾರ್ಯದರ್ಶಿ ಅನ್ವರ್ ಬಾಗೇವಾಡಿ ಮಾತನಾಡಿ, ರಾಜ್ಯದಲ್ಲಿ ಪದೇ ಪದೇ ಇಂತಹ ಘಟನೆಗಳು ನಡೆಯುತ್ತಿದ್ದರೂ ಸರ್ಕಾರ ಕ್ರಮ ತೆಗೆದುಕೊಳ್ಳುತ್ತಿಲ್ಲ ಎಂದು ಆಕ್ರೋಶ ವ್ಯಕ್ತಪಡಿಸಿದರು. ಜಿಲ್ಲಾಡಳಿತ ಕಾರ್ಯಪ್ರವೃತ್ತವಾಗಿ ವಿದ್ಯಾರ್ಥಿಗಳಿಗೆ ಆತ್ಮಸ್ಥೈರ್ಯ ತುಂಬುವ ಕೆಲಸ ಮಾಡಬೇಕು. ಶಾಲಾ-ಕಾಲೇಜು ಕ್ಯಾಂಪಸ್‌ಗಳಲ್ಲಿ ತಿಂಗಳಿಗೊಮ್ಮೆ ಸೌಜನ್ಯ ಭೇಟಿ ನೀಡಿ, ವಿದ್ಯಾರ್ಥಿಗಳ ಅಹವಾಲು ಸ್ವೀಕರಿಸಿ, ಇಂತಹ ಘಟನೆಗಳಿಗೆ ಆಸ್ಪದ ಸಿಗದ ಹಾಗೆ ಕಟ್ಟೆಚರ ವಹಿಸಬೇಕು ಎಂದು ಆಗ್ರಹಿಸಿದರು.

ಈ ಸಂದರ್ಭದಲ್ಲಿ ಪಕ್ಷದ ಕಾರ್ಯಕರ್ತರು, ಉಪಾಧ್ಯಕ್ಷ ಹಿದಾಯತುಲ್ ಕಾಗದಗಾರ, ಕಾರ್ಯದರ್ಶಿ ಇರ್ಫಾನ್ ಗುಲಗುಂದಿ, ಮುಸ್ತಾಕ್ ಕಟ್ಟಿಮನಿ, ವಾಸಿಮ್ ರಬಕವಿ, ಮುಜಹಿದ್ ಕಣಕೇನ್ನವರ, ಯಾಸೀನ್ ಹುಬ್ಬಳ್ಳಿ, ನವೀದ್ ಕಮನ್ಗಾರ, ಮುಸ್ತಾಕ್ ಹೊಸಮನಿ, ಜುನೆದ ಢಾಲಾಯತ ಮುಂತಾದವರು ಉಪಸ್ಥಿತರಿದ್ದರು.

ಪರಿಹಾರದ ಹಣವನ್ನು ರೈತರಿಗೇ ಒದಗಿಸಿ

■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಸರಕಾರದಿಂದ ಮಂಜೂರಾದ ಬರ ಪರಿಹಾರ, ಬೆಳೆ ವಿಮಾ ಇನ್ನಿತರೆ ಸಬ್ಸಿಡಿ ಹಣವನ್ನು ರೈತರಿಗೆ ಸರಿಯಾಗಿ ಮುಟ್ಟಿಸಬೇಕು ಎಂದು ಆಗ್ರಹಿಸಿ ಭಾರತೀಯ ಕಿಸಾನ್ ಸಂಘದ ತಾಲೂಕು ಘಟಕದ ವತಿಯಿಂದ ಸೋಮವಾರ ತಹಸೀಲ್ದಾರರ ಮೂಲಕ ಸರಕಾರಕ್ಕೆ ಮನವಿ ಅರ್ಪಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ರೈತ ಮುಖಂಡರು, ಸರಕಾರದಿಂದ ರೈತರಿಗೆ ಬೆಳೆ ಹಾನಿ, ಪರಿಹಾರವಾಗಿ ಬಂದ ಹಣವನ್ನು ಬ್ಯಾಂಕ್ ಅಧಿಕಾರಿಗಳು ರೈತರ ಸಾಲದ ಖಾತೆಗಳಿಗೆ ಜಮಾ ಮಾಡಿಕೊಳ್ಳುತ್ತಿರುವದು ತಿಳಿದು ಬಂದಿದೆ. ಇದನ್ನು ಸರಕಾರ ಕೂಡಲೇ ನಿಲ್ಲಿಸಬೇಕು. ರೈತರಿಗೆ ಸರಕಾರದಿಂದ ಬಂದ ಬರ ಪರಿಹಾರ, ಅನ್ನಭಾಗ್ಯ, ಗೃಹಲಕ್ಷ್ಮೀ, ಪಿ.ಎಮ್. ಕಿಸಾನ್, ನರೇಗಾ ಯೋಜನೆ, ವೃದ್ಧಾಪ್ಯ

ವೇತನ ಇತ್ಯಾದಿ ಹಣವನ್ನು ಕೊಡಲು ಹಿಂದೇಟು ಹಾಕುತ್ತಿದ್ದಾರೆ ಎಂದು ಆರೊಪಿಸಿದರು.

ಸರಕಾರ ಹಾಗೂ ಜಿಲ್ಲಾಧಿಕಾರಿಗಳು ಕೂಡಲೇ ಬ್ಯಾಂಕ್ ಅಧಿಕಾರಿಗಳಿಗೆ ಸೂಚನೆ ನೀಡಿ, ಬರಗಾಲದಿಂದ ನೊಂದಿರುವ ರೈತರಿಗೆ ಬರುವ ಸಹಾಯಧನದ ಹಣವನ್ನು ಸಾಲದ ಖಾತೆಗೆ ಹಾಕಿಕೊಳ್ಳಬಾರದು. ಸಾಲ ಮರುಪಾವತಿಗಾಗಿ ಬ್ಯಾಂಕ್ ಅಧಿಕಾರಿಗಳು ನೋಟೀಸ್ ನೀಡುವದು, ಸಾಲ ತುಂಬಲು ಕಿರುಕುಳ ನೀಡುವುದನ್ನು ನಿಲ್ಲಿಸಬೇಕು ಎಂದು ಆಗ್ರಹಿಸಿದರು.

ಗ್ರೇಡ್-2 ತಹಸೀಲ್ದಾರ್ ಮಂಜುನಾಥ ಅಮಾಸಿ ಮನವಿ ಸ್ವೀಕರಿಸಿದರು. ಈ ಸಂದರ್ಭದಲ್ಲಿ ಭಾರತೀಯ ಕಿಸಾನ್ ಸಂಘದ ಅಧ್ಯಕ್ಷ ಟಾಕಪ್ಪ ಸಾತಪೂತೆ, ನಾಗರಾಜ ಪಾಟೀಲ್, ಭದ್ರಪ್ಪ ಈಳಗೇರ, ರಮೇಶ ಹುಲಕೋಟಿ, ಅಜಯ ಕರೀಗೌಡ್ರ, ಷಣ್ಮುಖ ಹೆಸರೂರ, ಬಾಪುಗೌಡ ಪಾಟೀಲ, ಮುತ್ತಪ್ಪ ಕಡಣ್ಣನವರ, ನೀಲಕಂಠಪ್ಪ ಕನೋಜ, ಗಂಗಾಧರ ಕೊಡಳ್ಳಿ,ಶಿವಪ್ಪ ಗಡಬಿಡಿ, ಕರಿಯಪ್ಪ ಹುರಕನವರ, ರಾಜು ನೆರ್ತಿ ಸೇರಿದಂತೆ ಅನೇಕ ರೈತರು ಹಾಜರಿದ್ದರು.

▶▶ ಮೊದಲನೇ ಪುಟದಿಂದ

ಶ್ರೀಮಠದ ಜಾತ್ರೆಯಲ್ಲಿ ಎಲ್ಲರೂ ಪಾಲ್ಗೊಳ್ಳಿ

ಪಟ್ಟಣದಲ್ಲಿನ ಶ್ರೀ ಫಕ್ಕೀರೇಶ್ವರ ಮಠದಿಂದ ಶ್ರೀ ಸೋಮೇಶ್ವರ ದೇವಸ್ಥಾನ, ದೂದಪೀರಾಂ ದರ್